# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –166 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 20–01–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 166 | RNI No: KARKAN/2023/88462 | KA/SK/CTA-874/2024-2026 | Chitradurga | Date: 20-01-2025 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕೃತಕ ಕೀಲು ಬದಲಾವಣೆ ಶಸ್ತ್ರಚಿಕಿತ್ಸೆ: ಬಡ ರೋಗಿಗಳಿಗೆ ವರದಾನ 2

ಆಧುನಿಕತೆಯ ಭರಾಟೆಯಲ್ಲಿ ಸುಗ್ಗಿ ಸಂಭ್ರಮ ಮರೆ ಆಗುತ್ತಿದೆ: ಅಪರ ಜಿಲ್ಲಾಧಿಕಾರಿ 3

ನಿರುದ್ಯೋಗಿ ವಿದ್ಯಾರ್ಥಿಗಳಿಗೆ ಆಸರೆಯಾಗಿದೆ ಯುವನಿಧಿ: ಆರ್.ಶಿವಣ್ಣ 4




ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ದೆಹಲಿಯ ಗಣರಾಜ್ಯೋತ್ಸವಕ್ಕೆ ಪ್ರಗತಿ ಪರರೈತ ರಂಗಣ್ಣ, ವೀಣಾ, ಡಿ.ಅರುಣ ಆಯ್ಕೆ

» ಮಹದೇವಪುರ ಶಿವಮೂರ್ತಿ.


ಪರಶುರಾಂಪುರ: ಚಳ್ಳಕೆರೆ ತಾಲ್ಲೂಕಿನ ಪರಶುರಾಂಪುರ ಹೋಬಳಿಯ ಟಿ.ಎನ್‌ಕೋಟೆ ಹಾಗೂ ದೋಡ್ಡಚೆಲ್ಲೂರುಗ್ರಾಪಂಯ ಕೃಷಿ ಸಖಿ ಸೇರಿದಂತೆ ಗುಡಿಹಳ್ಳಿ ಪ್ರಗತಿ ಪರರೈತ ಸೇರಿಒಟ್ಟು ಮೂರುಜನ ಜ.26ರಂದು ದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸದಲ್ಲಿ ಭಾಗವಹಿಸಲು ಆಯ್ಕೆಯಾಗಿದ್ದಾರೆ. ಟಿ.ಎನ್‌ಕೋಟೆಗ್ರಾಪಂಯ ಕೃಷಿ ಸಖಿ ಎಲ್ ಪಿ ವೀಣಾ ರಾಷ್ಟ್ರೀಯ ಜೀವನೋಪಾಯ ಕೌಶಲ್ಯಾಭಿವೃದ್ಧಿ ಸಂವರ್ದನಾ ಸಂಸ್ಥೆಯ ಅಡಿಯಲ್ಲಿ 2022ರಲ್ಲಿ ಆಯ್ಕೆಯಾಗಿದ್ದರು. ಕೃಷಿ ಹಾಗೂ ಅಟಲ್ ಭೂಜಲ ಯೋಜನೆಅಡಿಯಲ್ಲಿ ಸಿಆರ್ ಪರಿಯಾಗಿ ನೀರಿನ ಸಂರಕ್ಷಣೆ ಬಗ್ಗೆ ಸ್ವಸಹಾಯ ಸಂಘ ಮಹಿಳಿಯರಿಗೆ,ರೈತರು ಹಾಗೂ ಗ್ರಾಮಸ್ಥರಿಗೆಕಾರ್ಯಕ್ರಮದ ಮೂಲಕ ಅರಿವು ಮೂಡಿಸುತ್ತಿದ್ದುಇವರಕಾರ್ಯ ವೈಖರಿಯನ್ನ ಗುರುತಿಸಿ ಅಟಲ್ ಭೂ ಜಲ ಯೋಜನೆಯಡಿಯಲ್ಲಿ ವಾಟರ್ ವಾರಿಯರ್ಸ್‌ಎಂದು ಗುರುತಿಸಿ ವಿಶೇಷ ಪ್ರತಿನಿಧಿಯಾಗಿದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸದಲ್ಲಿ ಭಾಗವಹಿಸಲು ಆಯ್ಕೆಯಾಗಿದ್ದಾರೆ. ದೋಡ್ಡಚೆಲ್ಲೂರು ಗ್ರಾಪಂಯಡಿ.ಅರುಣ ಸ್ವಸಹಾಯ ಸಂಘದ ಸದಸ್ಯರಾಗಿದ್ದಇವರುಜಿಪಂಎನ್‌ಆರ್ ಎಲ್ ಎಂ ಯೋಜನೆ ಮೂಲಕ ಕೃಷಿ ಸಖಿಯಾಗಿಆಯ್ಕೆಯಾಗಿದ್ದರು. ಇಬ್ಬರೂ ಕೃಷಿ ವಿಜ್ಞಾನಕೇಂದ್ರದಲ್ಲಿ ಸಾವಯವ ಹಾಗೂ ನೈಸರ್ಗಿಕ ಕೃಷಿ ತರಬೇತಿ ಪಡೆದಿರುವಇವರನ್ನುರೈತರಿಗೆ ಕೃಷಿ ಇಲಾಖೆಯಿಂದ ಲಭಿಸುವ ಯೋಜನೆಗಳು ಕುರಿತು ಮಾಹಿತಿಜತೆಇಲಾಖೆಯಿಂದ ರೈತರು,ಮಹಿಳಾ ಫಲಾನುಭವಿಗಳಿಗೆ ಯೋಜನೆರೂಪಿಸುವಲ್ಲಿ ಸಹಕಾರಿಯಾಗಿದ್ದರಿಂದ ಗಣರಾಜ್ಯೋತ್ಸವದಲ್ಲಿ ಭಾಗವಹಿಸಲುಆಯ್ಕೆಯಾಗಿದ್ದಾರೆ.ಪರಶುರಾಂಪುರ ಹೋಬಳಿಯ ಇಬ್ಬರು ಕೃಷಿ ಸಖಿಯರು ಹಾಗೂ ಗುಡಿಹಳ್ಳಿ ಗ್ರಾಮದ ಪ್ರಗತಿಪರರೈತರಂಗಣ್ಣ ಸೇರಿದಂತೆ ಚಳ್ಳಕೆರೆ ತಾಲ್ಲೂಕಿನ ಮೂರುಜನ ಚಿತ್ರದುರ್ಗಜಿಲ್ಲೆಯಿಂದದೆಹಲಿಯಲ್ಲಿ ನಡೆಯುವ ಜ.26ರಂದು ನಡೆಯುವಗಣರಾಜ್ಯೋತ್ಸದಲ್ಲಿ ಭಾಗವಹಿಸಲಿದ್ದಾರೆ.

> ನಮ್ಮಕಾರ್ಯವೈಖರಿಯನ್ನ ಗುರುತಿಸಿ ದೆಹಲಿಯಲ್ಲಿ ನಡೆಯುವಗಣರಾಜ್ಯೋತ್ಸವದಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿದ ಅಟಲ್ ಭೂ ಜಲ ಅಧಿಕಾರಿಗಳ ವರ್ಗ ಹಾಗೂ ಎನ್‌ಆರ್‌ಎಲ್ ಎಂ ಮತ್ತು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಧನ್ಯವಾದಗಳು.
>
> » **ಎಲ್ ಪಿ ವೀಣಾ ಮತ್ತುಡಿ. ಅರುಣ ಕೃಷಿ ಸಖಿಯರು**

### ಅನುದಾನ ಬಿಡುಗಡೆಗೆ ಸಚಿವ ಪ್ರಿಯಾಂಕ್ ಖರ್ಗೆಗೆ ಶಾಸಕ ಬಸವರಾಜು ಶಿವಗಂಗಾ ಒತ್ತಾಯ

» ಬೆಂಗಳೂರು

ಚನ್ನಗಿರಿ ಕ್ಷೇತ್ರದ ಅಭಿವೃದ್ಧಿ ವಿಚಾರ ಕುರಿತಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವ ಪ್ರಿಯಾಂಕ್ ಖರ್ಗೆ ರವರನ್ನು ಚನ್ನಗಿರಿ ಶಾಸಕರಾದ ಬಸವರಾಜು ವಿ ಶಿವಗಂಗಾ ಭೇಟಿ ಮಾಡಿದರು. ವಿಕಾಸ ಸೌಧದ ಸಚಿವರ ಕಚೇರಿಯಲ್ಲಿ ಭೇಟಿ ಮಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯ ವೈಖರಿಗಳು, ಕೈಗೊಳ್ಳಬೇಕಾದ ಅವಶ್ಯಕ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚೆ ಮಾಡಿದರು. ತಮ್ಮ ಇಲಾಖೆ ವ್ಯಾಪ್ತಿಯಲ್ಲಿ ಅನುದಾನ ಬಿಡುಗಡೆಗೆ ಮಾಡುವಂತೆ ಒತ್ತಾಯಿಸಿದರು. ಗ್ರಾಮೀಣ ಭಾಗದಲ್ಲಿ ಮೂಲಭೂತ ಸೌಕರ್ಯ ಮತ್ತು ಅಗತ್ಯ ಕ್ರಮ ಕೈಗೊಳ್ಳಲು ಹೆಚ್ಚಿನ ಅನುದಾನ ನೀಡಬೇಕು, ಕ್ಷೇತ್ರದಲ್ಲಿ ಸರ್ವಾಂಗೀಣ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಸಚಿವರಲ್ಲಿ ಮನವರಿಕೆ ಮಾಡಿದರು.

# ಸ್ಥಳದಲ್ಲಿಯೇ ಪ್ರಕರಣ ಇತ್ಯರ್ಥಪಡಿಸಲು ಸಿದ್ಧರಾಗಿ: ಜಿಲ್ಲಾಧಿಕಾರಿ ಟಿ.ವೆಂಕಟೇಶ್

» ಚಿತ್ರದುರ್ಗ



ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರು ಇದೇ ಜ.22 ರಿಂದ 24 ರವರಗೆ ಜಿಲ್ಲಾ ಪ್ರವಾಸ ಕೈಗೊಂಡು ಸಾರ್ವಜನಿಕರ ಕುಂದುಕೊರತೆ ಅಹವಾಲು ಸ್ವೀಕಾರ ಮತ್ತು ವಿಚಾರಣೆ ನಡೆಸಲಿದ್ದು, ತಮ್ಮ ಇಲಾಖೆಯ ಪ್ರಕರಣಗಳು ವಿಚಾರಣೆ ನಡೆದ ಸಂದರ್ಭದಲ್ಲಿ ಅಗತ್ಯ ದಾಖಲೆಗಳೊಂದಿಗೆ ಸ್ಥಳಲ್ಲಿಯೇ ಪ್ರಕರಣ ವಿಲೇವಾರಿಗೆ ಸಿದ್ಧರಾಗಿರಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕರ್ನಾಟಕ ಉಪ ಲೋಕಾಯುಕ್ತರು ಜ.22 ರಿಂದ 24 ರವರೆಗೆ ಜಿಲ್ಲೆಗೆ ಸಾರ್ವಜನಿಕರ ಅಹವಾಲು ಸ್ವೀಕಾರ ಮತ್ತು ದೂರುಗಳ ವಿಚಾರಣೆ ನಡೆಸಲು ಆಗಮಿಸುತ್ತಿದ್ದು, ಈ ಸಂಬಂಧ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಪೂರ್ವಸಿದ್ದತೆ ಕುರಿತು ಜಿಲ್ಲಾಮಟ್ಟ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ದೂರುಗಳ ಬಗ್ಗೆ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಉಪ ಲೋಕಾಯುಕ್ತರ ವಿಚಾರಣೆ ನಡೆಸುವರು. ಸಂಬಂದಪಟ್ಟ ಇಲಾಖೆ ಮುಖ್ಯಸ್ಥರು ದೂರುದಾರಿಗೆ ಈ ಕುರಿತು ಮಾಹಿತಿ ನೀಡಿ, ವಿಚಾರಣೆಗೆ ಹಾಜರಾಗುವಂತೆ ತಿಳಿಸಬೇಕು. ಕೆಲವೊಂದು ದೂರುಗಳು ವೈಯಕ್ತಿಕ ಹೆಸರಿನೊಂದಿಗೆ ದಾಖಲಾಗಿವೆ. ಆದರೆ ಅಂತಹ ಅಧಿಕಾರಿಗಳು ಸದ್ಯ ಬೇರೆಡೆ ವರ್ಗಾವಣೆಯಾಗಿದ್ದರೆ, ಅವರ ಸ್ಥಾನದಲ್ಲಿರುವ ಅಧಿಕಾರಿಗಳು ಪ್ರಕರಣದ ಮಾಹಿತಿ ಹಾಗೂ ಸ್ಥಿತಿಗತಿಯನ್ನು ವಿಚಾರಣೆ ವೇಳೆ ನಿಖರವಾದ ಉತ್ತರವನ್ನು ಉಪಲೋಕಾಯುಕ್ತರಿಗೆ ತಿಳಿಸಬೇಕು ಎಂದರು. ಕಚೇರಿ ಹಂತದಲ್ಲಿಯೇ ದೂರುಗಳ ಇತ್ಯರ್ಥಪಡಿಸಿ: ಇಲಾಖಾ ಕಚೇರಿಗಳಿಗೆ ಬರುವ ದೂರುಗಳನ್ನು ಕಚೇರಿ ಹಂತದಲ್ಲಿಯೇ ಇತ್ಯರ್ಥಪಡಿಸಲು ಕ್ರಮವಹಿಸಬೇಕು. ಕಚೇರಿಗೆ ಬರುವ ದೂರುಗಳು ವಿಲೇವಾರಿ ಆಗಿವೆಯೇ ಎಂಬುದನ್ನು ಇಲಾಖೆ ಮುಖ್ಯಸ್ಥರು ಪರಿಶೀಲಿಸಬೇಕು. ಅಗತ್ಯ ದಾಖಲೆಗಳು ಬೇಕಾಗಿದ್ದರೆ ಅರ್ಜಿದಾರರಿಗೆ ದಾಖಲೆ ಸಲ್ಲಿಸಲು ಕಾಲಾವಕಾಶ ನೀಡಬೇಕು. ನಿಗಧಿತ ಸಮಯಲ್ಲಿ ದಾಖಲೆಗಳನ್ನು ಸಲ್ಲಿಸದಿದ್ದರೆ ಮಾತ್ರ ಹಿಂಬರಹ ನೀಡಿ, ಸೂಕ್ತ ತಿಳುವಳಿಕೆ ನೀಡಬೇಕು. ಅಸಮರ್ಪಕ ಮಾಹಿತಿ ನೀಡಿ ಪ್ರಕರಣ ಇತ್ಯರ್ಥ ಪಡಿಸಬೇಡಿ ಎಂದರು.

ಆರೋಗ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಅಬಕಾರಿ, ಬೆಸ್ಕಾಂ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಸಣ್ಣ ನೀರಾವರಿ ಸೇರಿದಂತೆ ವಿವಿಧ ಇಲಾಖೆಗಳಿಗ ಸಂಬಂಧಿಸಿದಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ಪ್ರಕರಣಗಳ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ತಮ್ಮ ಇಲಾಖೆಯ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಪ್ರಸಕ್ತ ಹಂತದ ಮಾಹಿತಿ ತಮ್ಮ ಬಳಿ ಲಭ್ಯವಿರಬೇಕು ಎಂದು ತಿಳಿಸಿದ ಅವರು, ವಿವಿಧ ಇಲಾಖೆಗಳಿಗೆ ಉಪಲೋಕಾಯುಕ್ತರು ದಿಢೀರ್ ಭೇಟಿ ನೀಡಲಿದ್ದು, ಅಧಿಕಾರಿಗಳು ತಮ್ಮ ಕಚೇರಿ ಆವರಣ ಸ್ವಚ್ಛವಾಗಿಟ್ಟುಕೊಳ್ಳಬೇಕು, ಪ್ರತಿಯೊಬ್ಬ ಅಧಿಕಾರಿಗಳು, ನೌಕರರು ವೈಯಕ್ತಿಕ ಕ್ಯಾಶ್ ರಿಜಿಸ್ಟರ್ ನಿರ್ವಹಣೆ, ಚಲನ–ವಲನ ರಿಜಿಸ್ಟರ್, ಫೈಲ್ ಮೂಮೆಂಟ್ ರಿಜಿಸ್ಟರ್ ಸರಿಯಾಗಿ ನಿರ್ವಹಣೆ ಮಾಡಬೇಕು. ಮುಖ್ಯವಾಗಿ ಟಪಾಲು ಶಾಖೆಗೆ ಬರುವ ದೂರುಗಳನ್ನು ನಿಗಧಿತ ಸಮಯದಲ್ಲಿಯೇ ವಿಲೇವಾರಿ ಆಗಬೇಕು ಎಂದರು.

ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ ಮಾತನಾಡಿ, ಚಿತ್ರದುರ್ಗ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತಸಂಸ್ಥೆಯಲ್ಲಿ73ಪ್ರಕರಣಗಳು ದಾಖಲಾಗಿದ್ದು, ಇದರಲ್ಲಿ ಈಗಾಗಲೇ 2 ಪ್ರಕರಣಗಳು ಇತ್ಯರ್ಥಗೊಂಡಿದ್ದು, 71 ಪ್ರಕರಣಗಳು ಇವೆ. ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ಪ್ರಕರಣಗಳ ಬಗ್ಗೆ ಜಿಲ್ಲಾಮಟ್ಟದ ಅಧಿಕಾರಿಗಳು ತಮ್ಮ ಪ್ರಕರಣದ ಸಂಪೂರ್ಣ ಮಾಹಿತಿಯನ್ನು ತಿಳಿದುಕೊಂಡಿರಬೇಕು. ಅಧಿಕಾರಿಗಳು ಕಚೇರಿಗೆ ನಿಗಧಿತ ಸಮಯದಲ್ಲಿ ಹಾಜರಿರಬೇಕು. ಕಚೇರಿಗೆ ಸಲ್ಲಿಕೆಯಾಗುವ ದೂರುಗಳು ಹಾಗೂ ಅಹವಾಲುಗಳ ಬಗ್ಗೆ ಗಮನಹರಿಸಬೇಕು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಉಪ ಲೋಕಾಯುಕ್ತರು ಜ. 21 ರಂದು ಸಂಜೆ ಬೆಂಗಳೂರಿನಿಂದ ಹೊರಟು, ರಾತ್ರಿ 8 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸಿ, ಪ್ರವಾಸಿ ಮಂದಿರದಲ್ಲಿ ವಾಸ್ತವ್ಯ ಮಾಡುವರು. ಜ.22 ರಂದು ಬೆಳಿಗ್ಗೆ 10 ರಿಂದ 1.30 ರವರೆಗೆ ಮತ್ತು ಮಧ್ಯಾಹ್ನ 2.30 ರಿಂದ 05 ರವರೆಗೆ ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯ ಎಸ್.ಜೆ. ಕಲ್ಯಾಣ ಮಂಟಪದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ಹಮ್ಮಿಕೊಳ್ಳಲಾಗಿದೆ. ಸಂಜೆ 5.30 ಗಂಟೆಗೆ ಎಸ್.ಜೆ. ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕುರಿತಂತೆ ಶಿಕ್ಷಣ, ರೇಷ್ಮೆ, ಕೃಷಿ, ತೋಟಗಾರಿಕೆ ಇಲಾಖೆಗಳು, ಆರ್‌ಟಿಒ, ಸಬ್‌ರಿಜಿಸ್ಟರ್, ಸಮಾಜ ಕಲ್ಯಾಣ ಹಾಗೂ ನ್ಯಾಯಾಂಗ ಮುಂತಾದ ಇಲಾಖೆ ಅಧಿಕಾರಿಗಳಿಗೆ ಏರ್ಪಡಿಸಿರುವ ಕಾನೂನು ಸಾಕ್ಷರತಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಜ.23 ರಂದು ಬೆ. 9.45 ಗಂಟೆಗೆ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಆವರಣದಲ್ಲಿನ ಬಾರ್ ಅಸೋಸಿಯೇಶನ್ ಸಭಾಂಗಣದಲ್ಲಿ ವಕೀಲರ ಸಂಘ ಹಾಗೂ ಚಿತ್ರದುರ್ಗ ಬಾರ್ ಅಸೋಸಿಯೇಶನ್ ಸದಸ್ಯರೊಂದಿಗೆ ಸಾರ್ವಜನಿಕ ಆಡಳಿತ ಮತ್ತು ಗುಡ್ ಗೌರ್ನೆನ್ಸ್ ಕುರಿತು ಸಂವಾದ ನಡೆಸುವರು. ಬೆಳಿಗ್ಗೆ 11 ರಿಂದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಬೆ. 11.30 ರಿಂದ 1.30 ರವರೆಗೆ ಹಾಗೂ ಮಧ್ಯಾಹ್ನ 2.30 ರಿಂದ ಚಿತ್ರದುರ್ಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ಈಗಾಗಲೆ ದಾಖಲಾಗಿರುವ (ಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೆ ಒಳಪಡುವ) ಪ್ರಕರಣಗಳ ಕುರಿತು ತನಿಖೆ, ವಿಚಾರಣೆಗೆ ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಕಾನೂನು ರೀತ್ಯಾ ವಿಚಾರಣೆ ನಡೆಸುವರು.

ಜ. 24 ರಂದು ಬೆ. 09 ರಿಂದ 10 ಗಂಟೆಯವರೆಗೆ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಜಿಲ್ಲೆಯ ನ್ಯಾಯಾಂಗ ಇಲಾಖೆ ಅಧಿಕಾರಿಗಳೊಂದಿಗೆಸಭೆಹಾಗೂಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆ. 10.15 ಗಂಟೆಗೆ ನಗರದ ಪ್ರವಾಸಿ ಮಂದಿರದಲ್ಲಿ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ನಂತರ ವಿವಿಧ ಸರ್ಕಾರಿ ಕಚೇರಿಗಳು ಹಾಗೂ ಸಂಸ್ಥೆಗಳಿಗೆ ಅನಿರೀಕ್ಷಿತ ಭೇಟಿ ನೀಡುವರು ಎಂದು ತಿಳಿಸಿದರು.

ಸಭೆಯಲ್ಲಿ ಚಿತ್ರದುರ್ಗ ಉಪವಿಭಾಗದ ಡಿವೈಎಸ್‌ಪಿ ದಿನಕರ್, ಕೈಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಆನಂದ್, ಗಣಿ ಇಲಾಖೆ ಉಪನಿರ್ದೇಶಕ ಮಹೇಶ್, ಡಿಹೆಚ್‌ಒ ಡಾ.ಜಿ.ಪಿ.ರೇಣುಪ್ರಸಾದ್ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

## ಪ್ರಮುಖ ಸುದ್ದಿ

### ಸಾಂಸ್ಕೃತಿಕ ನಾಯಕ ಬಸವಣ್ಣ ವರ್ಷಾಚರಣೆ ಕಾರ್ಯಕ್ರಮದಲ್ಲಿ ಶ್ರೀ ಶಾಂತವೀರ ಸ್ವಾಮೀಜಿ ಅಭಿಮತ

# ದಲ್ಲಾಳಿ ವ್ಯವಸ್ಥೆ ಜನರನ್ನು ಅಜ್ಞಾನ, ಶೋಷಣೆಗೆ ತಳ್ಳುತ್ತದೆ

» ಹೊಸದುರ್ಗ




ಸಾಂಸ್ಕೃತಿಕ ನಾಯಕ ವರ್ಷದ ಆಚರಣೆ ಕರ್ನಾಟಕದಲ್ಲಿ ಎಲ್ಲಿಯೂ ನಡೆಯುತ್ತಿಲ್ಲ. ಅದುಸಾಣೇಹಳ್ಳಿಯಲ್ಲಿಮಾತ್ರನಡೆಯುತ್ತಿದೆ. ವಾರ್ಷಿಕ ಸಮಾರಂಭವನ್ನು ತುಂಬಾ ಅರ್ಥಗರ್ಭಿತವಾಗಿ ಸಾಣೇಹಳ್ಳಿಯಲ್ಲಿ ಮಾತ್ರ ನಡೆಯುತ್ತಿರುವುದು ತುಂಬಾ ಸಂತೋಷ. ಪರಿಸರ ಚೆನ್ನಾಗಿದ್ದರೆ ಮನಸ್ಸು ಚೆನ್ನಾಗಿರುತ್ತದೆ. ಪಂಡಿತಾರಾಧ್ಯ ಶ್ರೀಗಳು ಜನಮಾನಸದಲ್ಲಿ ಉಳಿಯುವಂಥ ಕೆಲಸವನ್ನು ನಿರಂತರವಾಗಿ ಮಾಡುತ್ತಾ ಬಂದಿದ್ದಾರೆ. ಬಸವಣ್ಣ ದೇವರು ಮತ್ತು ಭಕ್ತರ ಮಧ್ಯ ಇದ್ದ ದಲ್ಲಾಳಿಯನ್ನು ತೆಗೆದು ಹಾಕಿದರು. ಮಾನವ ಮತ್ತು ದೇವರು ಎನ್ನುವಂಥ ಕಂದಕವನ್ನು ದೂರ ಮಾಡಿದರು. ದಲ್ಲಾಳಿಯ ವ್ಯವಸ್ಥೆಯನ್ನು ದೂರ ಮಾಡಿದವರೇ ಬಸವಣ್ಣನವರು. ದಲ್ಲಾಳಿಯ ವ್ಯವಸ್ಥೆಯೇ ನಮ್ಮನ್ನು ಅಜ್ಞಾನಕ್ಕೆ, ಅಂಧಕಾರಕ್ಕೆ, ಶೋಷಣೆಗೆ ತಳ್ಳುತ್ತದೆ ಎಂದು ಹೊಸದುರ್ಗ ಕುಂಚಿಟಿಗ ಮಠದ ಪೀಠಾಧ್ಯಕ್ಷರಾದ ಶ್ರೀ ಶಾಂತವೀರ ಸ್ವಾಮೀಜಿ ಅಭಿಮತ ವ್ಯಕ್ತಪಡಿಸಿದರು.

ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಸರ್ಕಾರ ಘೋಷಣೆ ಮಾಡಿ ಒಂದು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ತಾಲೂಕಿನ ಸಾಣೇಹಳ್ಳಿ ಮಠದ ಎಸ್ ಎಸ್ ರಂಗಮಂದಿರದಲ್ಲಿ ಶನಿವಾರ ಆಯೋಜಿಸಿದ್ದ ವಾರ್ಷಿಕ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು.

> ಇಡೀ ನಾಡಿನಲ್ಲಿ ಶರಣರ ವಿಚಾರಗಳ ಬಗ್ಗೆ ಯಾರೂ ಚಕಾರವೆತ್ತಲಿಲ್ಲ. ಯಾವಾಗಲೂ ಪಂಡಿತಾರಾಧ್ಯ ಶ್ರೀಗಳು ಬಸವಣ್ಣನವರ ವಿಚಾರಗಳನ್ನು ಜನಸಾಮಾನ್ಯರಿಗೆ ಮತ್ತೆ ಮತ್ತೆ ಮೆಲುಕು ಹಾಕಬೇಕು ಎನ್ನುವಂಥ ಅಭಿಲಾಷೆ ಇದೆ. ಶರಣರ ತತ್ವ, ವಿಚಾರಗಳನ್ನು ಎಲ್ಲ ಕಡೆ ಕಾರ್ಯಕ್ರಮಗಳನ್ನು ರೂಪಿಸಬೇಕು. ಸಮಾಜದಲ್ಲಿ ಎಲ್ಲ ಕಡೆ ಜಾತಿಯ ಭೂತ ಹೆಚ್ಚಾಗಿದೆ. ಜಾತಿಯ ಶ್ರೇಷ್ಠತೆ ಇನ್ನೂ ಜೀವಂತವಾಗಿದೆ. ಜಾತಿಗಿಂತ ನೀತಿ ಮುಖ್ಯ ಎಂದು ಶರಣರು ಸಾರಿದರು. ಲೋಕಕಲ್ಯಾಣಕ್ಕಾಗಿ ಹೋರಾಟ ಮಾಡಿ ಮಾನವ ಕುಲವನ್ನು ಉತ್ತುಂಗಕ್ಕೇರಿಸಿದರು. ಇವತ್ತು ನಮ್ಮ ಮಧ್ಯೆ ಪಟ್ಟಭದ್ರಹಿತಾಸಕ್ತರು ಇದ್ದಾರೆ. ಅವರಿಂದ ಎಚ್ಚರಿಕೆಯಿಂದ ಇರಬೇಕಾದ ಅನಿವಾರ್ಯತೆ ಇದೆ. ವಚನ ಸಾಹಿತ್ಯ ಕನ್ನಡದಲ್ಲಿ ಇರುವುದರಿಂದ ಯಾರೂ ಓದಬೇಡಿ. ಸಂಸ್ಕೃತ ಓದಿದರೆ ಮಾತ್ರ ಸ್ವರ್ಗ ಸಿಗುತ್ತದೆ ಎನ್ನುವಂಥ ಮಾತು ಪೂಜಾರಿ ಪುರೋಹಿತರಿಂದ ಹೆಚ್ಚಾಗಿದೆ.
>
> » **ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಕನಕ ಗುರುಪೀಠ ಶಾಖಮಠ,ಕೆಲ್ಲೋಡು**

ಬುದ್ಧ, ಅಂಬೇಡ್ಕರ್‌ರ ತತ್ವಗಳಿಗೆ ಪೂರಕವಾಗಿ ಕೆಲವೇ ಕೆಲವು ಮಠಗಳು ಮಾಡುತ್ತಿವೆ. ಎಲ್ಲ ಜಯಂತಿಗಳು ಜಾತಿಯ ಆಧಾರದ ಮೇಲೆ ನಡೆಯುತ್ತಿರುವುದು ನೋವಿನ ಸಂಗತಿ. ಶರಣರ ಯಾವ ಉದ್ದೇಶವನ್ನಿಟ್ಟುಕೊಂಡು ಜಯಂತಿಗಳು ಪ್ರಾರಂಭವಾದವೋ ಅವುಗಳು ಈಗ ಜಾತಿ ಜಯಂತಿಗಳಾಗಿ ವಿಜೃಂಬಿಸುತ್ತಿವೆ. ಎಲ್ಲ ಕಡೆ ಜಾತಿ, ಮೌಢ್ಯ, ಮಾನವರ ಮಧ್ಯೆ ಕಂದಕಗಳು ಸೃಷ್ಟಿಯಾಗಿವೆ. ಸಂವಿಧಾನದ ಎಲ್ಲ ಆಶಯಗಳನ್ನು ಗಾಳಿಗೆ ತೂರುತ್ತಿದ್ದೇವೆ. ರಾಜಕಾರಣಿಗಳು ದೊಡ್ಡ ದೊಡ್ಡ ಸ್ವಾಮಿಗಳನ್ನಿಟ್ಟುಕೊಂಡೇ ದೊಡ್ಡ ದೊಡ್ಡ ಜಯಂತಿಗಳನ್ನು ಮಾಡುತ್ತಿದ್ದಾರೆ. ದೊಡ್ಡ ಸಮುದಾಯದ ಸ್ವಾಮಿಗಳನ್ನಿಟ್ಟುಕೊಂಡು ಜಯಂತಿ ಮಾಡುವುದಲ್ಲ. ಸಣ್ಣ ಸಮುದಾಯದ ಸ್ವಾಮಿಗಳನ್ನಿಟ್ಟುಕೊಂಡು ಜಯಂತಿ ಆಚರಿಸಬೇಕು ಎಂದರು.

ಕಾರ್ಯಕ್ರಮದ ದಿವ್ಯ ಸನಿಧ್ಯ ವಹಿಸಿ ಪಂಡಿತಾರಾಧ್ಯ ಶ್ರೀಗಳು ಮಾತನಾಡಿ, ಯಾರೂ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಲು ಚಿಂತನೆ ಮಾಡಿರಲಿಲ್ಲ. ಆದರೆ, ಸಿದ್ಧರಾಮಯ್ಯನವರು ಆ ಕೆಲಸವನ್ನು ಮಾಡಿದರು. ಅದರ ಹಿನ್ನಲೆಯಲ್ಲಿ ಅನೇಕ ಯೋಜನೆಗಳು, ಚಿಂತನೆಗಳು ಮಾಡದೇ ಇರುವುದು ನಿರಾಸೆಯುಂಟಾಯಿತು. ಸಾಂಸ್ಕೃತಿಕ ನಾಯಕ ಘೋಷಣೆ ಮಾಡಿದ್ದು ಖುಷಿ ಕೊಟ್ಟಿದೆ. ಆದರೆ ಬಸವಣ್ಣನವರ ತತ್ವಗಳನ್ನು ಜನಮಾನಸಕ್ಕೆ ಮುಟ್ಟಿಸುತ್ತಿದ್ದೇವೆ ಎನ್ನುವ ಪ್ರಶ್ನೆಯನ್ನು ಹಾಕಿಕೊಳ್ಳಬೇಕು ಎಂದರು.

ಬಸವಣ್ಣನವರು ಕಾಯಕತತ್ವ, ದಾಸೋಹ ತತ್ವ ಹಾಗೂ ಆತ್ಮಕಲ್ಯಾಣಕ್ಕಾಗಿ ಇಷ್ಟಲಿಂಗಪೂಜೆಯನ್ನು ಜಾರಿಗೆ ತಂದರು. ಸ್ತ್ರೀ ಸಮಾನತೆಯನ್ನು ಎತ್ತಿಹಿಡಿದವರು. ಸ್ತ್ರೀಯರಿಗೆ ಗೌರವ ತಂದಕೊಟ್ಟವರು. ದಲಿತವರ್ಗದವರಿಂದ ಅನುಭವ ಮಂಟಪದ ಶಕ್ತಿಯನ್ನು ಹೆಚ್ಚಿಸಿದರು. ಹೀಗೆ ಅಪರೂಪದ ವ್ಯಕ್ತಿತ್ವವನ್ನು ಮೈಗೂಡಿಸಿಕೊಂಡಂಥ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಘೋಷಣೆ ಮಾಡಿದ್ದು ಇತಿಹಾಸದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರನ್ನು ಮರೆಯಲಿಕ್ಕೆ ಸಾಧ್ಯವಿಲ್ಲ. ಆ ಸಂದರ್ಭದಲ್ಲಿ ಸಿದ್ಧರಾಮಯ್ಯನವರನ್ನು ಗೌರವಿಸಬೇಕಾಗಿತ್ತು, ಸರಕಾರವನ್ನು ಗೌರವಿಸಬೇಕಾಗಿತ್ತು. ಅನೇಕರಿಗೆ ನಾವು ಹೇಳಿದ್ವಿ;


ಪುಟ ↘ 2

## ಫಾಸ್ಟ್ ನ್ಯೂಸ್

### ದಲ್ಲಾಳಿ ವ್ಯವಸ್ಥೆ ಜನರನ್ನು ಅಜ್ಞಾನ, ಶೋಷಣೆಗೆ ತಳ್ಳುತ್ತದೆ

» ಮೊದಲ ಪುಟದಿಂದ

ಆದರೆ ಯಾರೂ ಆಸಕ್ತಿಯನ್ನು ತೋರಿಸದೇ ಇದ್ದಾಗ ನಮಗೆ ನಿರಾಸೆಯುಂಟಾಯಿತು. ಒಳ್ಳೆಯ ಕೆಲಸವನ್ನು ಯಾರೇ ಮಾಡಿದರೂ ಅವರನ್ನು ಮೆಚ್ಚಿ ಪ್ರೋತ್ಸಾಹಿಸಲೇಬೇಕು. ದುಡಿಮೆಗೆ ಘನತೆಯನ್ನು ತಂದುಕೊಟ್ಟು ಕಾಯಕದ ಮಹತ್ವದ ಅರಿವನ್ನುಂಟು ಮಾಡಿದರು. ಸರಕಾರ ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದು ಎಷ್ಟು ಖುಷಿ ಕೊಡ್ತೋ ಆ ಸಾಂಸ್ಕೃತಿಕ ನಾಯಕನ ವಿಚಾರಗಳನ್ನು ವಿದ್ಯಾರ್ಥಿ ವೃಂದಕ್ಕೆ ಮುಟ್ಟಿಸುವ ಕಾರ್ಯ ಜಾರೂರಾಗಬೇಕಾಗಿದೆ ಎಂದು ಹೇಳಿದರು. ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿಸ್ವಾಮೀಜಿಮಾತನಾಡಿ, ಬಸವಣ್ಣ ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿ ಒಂದು ವರ್ಷವಾಯಿತು. ಸರಕಾರ ಸಾಂಸ್ಕೃತಿಕ ನಾಯಕ ಘೋಷಣೆ ಮಾಡಿದ್ದಷ್ಟೇ ಅಲ್ಲ, ಮನೆ-ಮನಗಳಲ್ಲೂ ವಚನಗಳನ್ನು ತಲುಪಿಸಬೇಕು. ವಚನಗಳನ್ನು ಅರಿವುದಷ್ಟೇ ಮುಖ್ಯವಲ್ಲ; ಆಚರಣೆಗೆ ತರಬೇಕು. ರಾಜಕೀಯ ನಾಯಕರು, ಸರಕಾರದ ಅಧಿಕಾರಿಗಳು, ಮಠಾಧೀಶರು ಶರಣರ ತತ್ವಗಳನ್ನು ಪಾಲಿಸಬೇಕು. ಆಗ ಮಾತ್ರ ಸಮಾಜ ಪರಿವರ್ತನೆ ಆಗಲು ಸಾಧ್ಯ. ಶರಣರು ಸಾಮಾಜಿಕ ಬದಲಾವಣೆ ತರಲು ಹಗಲಿರುಳು ಶ್ರಮಿಸಿದರು. ಪಂಡಿತಾರಾಧ್ಯ ಶ್ರೀಗಳು ಹತ್ತು ಹಲವು ಪ್ರಯೋಗಗಳನ್ನು ಮಾಡುತ್ತಿದ್ದಾರೆ. ಮತ್ತೆ ಕಲ್ಯಾಣದ ಮೂಲಕ ಇಡೀ ಕರ್ನಾಟಕದಲ್ಲಿ ಸಂಚಲನವನ್ನೇ ಸೃಷ್ಟಿಸಿದರು. ನೇರ ನಡೆ-ನುಡಿಯ ಸಂತ ನಮ್ಮ ಮಧ್ಯೆದಲ್ಲಿರುವುದೇ ನಮ್ಮೆಲ್ಲ ಸ್ವಾಮಿಗಳ ಪುಣ್ಯ ಎಂದರು.

ಉಪನ್ಯಾಸಕರಾಗಿ ಆಗಮಿಸಿದ ಚಟ್ನಳ್ಳಿ ಮಹೇಶ್ ಮಾತನಾಡಿ, ಶರಣರು ಕಾಯಕ ದಾಸೋಹ ಕಲ್ಪನೆಯನ್ನು ಎಂಟು ನೂರು ವರ್ಷಗಳ ಹಿಂದೆ ಜಾರಿಗೆ ತಂದರು. ಅರಿವು ಆಚಾರಕ್ಕೆ ಹೆಚ್ಚು ಮಹತ್ವ ಕೊಟ್ಟರು. ಶರಣರು ಅರಿವನ್ನು ಮೂಡಿಸುವ ಕೆಲಸ ಮಾಡಿದರು. ವೈಚಾರಿಕ ಪ್ರಪಂಚವನ್ನು ನಡುಗುವಂತೆ ಪ್ರಶ್ನೆ ಮಾಡಿದರು. ಸತ್ಯಶುದ್ಧವಾದ ಕಾಯಕ ಮಾಡುತ್ತಿದ್ದರು. ಕಾಯಕದಿಂದ ಬಂದುದು ಮಾತ್ರ ಸತ್ಯಶುದ್ಧವಾದುದು ಎಂದು ಸಂದೇಶವನ್ನು ಕೊಟ್ಟರು. 12ನೆಯ ಶತಮಾನದಲ್ಲಿ ಸುಂಕದ ಮೂಲಕ ದಾಸೋಹ ಪ್ರಜ್ಞೆಯನ್ನು ಮೂಡಿಸಿದರು. ಪರಿಸರ, ಆರೋಗ್ಯ, ಶಿಕ್ಷಣ, ರಾಜಕೀಯದ ಬಗ್ಗೆ ಪ್ರಜ್ಞೆಯುಳ್ಳವರಾಗಿದ್ದರು.ಮುಂದಿನವರ್ಷ ಬಸವಣ್ಣ ಜಾಗತಿಕ ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡುವಂತಾಗಲಿ. ಎಲ್ಲ ಸರಕಾರಿ ಕಚೇರಿಗಳಲ್ಲಿ ಸತ್ಯಕ್ಕನ ವಚನವನ್ನು ಹಾಕಬೇಕು ಎಂದರು. ನಿರ್ದೇಶಕ ವೈ.ಡಿ.ಬದಾಮಿ ಮಾತನಾಡಿದರು. ಆರಂಭದಲ್ಲಿ ಶಿವಕುಮಾರ ಕಲಾಸಂಘದ ಕಲಾವಿದರ "ಶಿವಯೋಗಿ ಸಿದ್ಧರಾಮೇಶ್ವರ" ನಾಟಕ ಪ್ರದರ್ಶನ ಮಾಡಿದರು. ನಾಗರಾಜ ಹೆಚ್ ಎಸ್ ಹಾಗೂ ಶರಣಕುಮಾರ್ ವಚನಗೀತೆಗಳನ್ನು ಹಾಡಿದರು. ಪ್ರದೀಪ್.ಎಂ ಸ್ವಾಗತಿಸಿದರೆ, ಶಿಕ್ಷಕಿ ದೀಪ ನಿರೂಪಿಸಿ ವಂದಿಸಿದರು.

### ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ ನಿಧನ

» ಚಳ್ಳಕೆರೆ



ಕಾಡುಗೊಲ್ಲರ ಸಮುದಾಯದ ಹಿರಿಯ ಮುತ್ಸದ್ದಿ, ಕಾಂಗ್ರೆಸ್ ಮುಖಂಡ, ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ ಅನಾರೋಗ್ಯ ಹಿನ್ನೆಲೆಯಲ್ಲಿ ಶನಿವಾರ ಮನೆಯಲ್ಲಿ ನಿಧನರಾದರು. ಕಳೆದ ಸುಮಾರು ನಾಲ್ಕು ದಶಕಗಳಕಾಲ ನಗರದ ಬಾಪೂಜಿ ವಿದ್ಯಾಸಂಸ್ಥೆಯಲ್ಲಿ ಶಿಕ್ಷಕರಾಗಿ, ಪ್ರಾಂಶುಪಾಲ, ಆಡಳಿತಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದ ಅವರು ನೂರಾರು ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪ್ರೋತ್ಸಾಹ ನೀಡಿದರು. ಶ್ರೀಕೃಷ್ಣ ವಿದ್ಯಾಸಂಸ್ಥೆ ಕಾರ್ಯದರ್ಶಿಯಾಗಿ, ಹೊಸದುರ್ಗ ತಾಲ್ಲೂಕಿನ ಮಾಡದಕೆರೆ ಮುರುಳಿಧರ ವಿದ್ಯಾಸಂಸ್ಥೆ ಸಂಸ್ಥಾಪಕರಾಗಿ,ಗೋಕುಲಪತ್ತಿನಸಹಕಾರಿಸಂಘದ ಸಂಸ್ಥಾಪಕ ಅಧ್ಯಕ್ಷ, ಎಪಿಎಂಸಿ ನಿರ್ದೇಶಕರಾಗಿ ಹಲವಾರು ಬಡಜನರ, ರೈತರ ಪರವಾಗಿ ಕಾರ್ಯನಿರ್ವಹಿಸಿದ್ದಾರೆ. ಶಿಕ್ಷಣ ಸಂಸ್ಥೆಗಳನ್ನು ಕಟ್ಟುವ ಮೂಲಕ ಬರಪೀಡಿತ ಪ್ರದೇಶದ ಮಕ್ಕಳಿಗೆ ಶಿಕ್ಷಣದ ಕಿಚ್ಚುಹಚ್ಚಿದ ಮಹಾನೀಯರು. ದಿವಂತಗ, ಮಾಜಿ ಸಚಿವ ಡಿ.ಮಂಜುನಾಥರವರ ಆಪ್ತರಾಗಿದ್ದರು. ಮೃತರು ಪತ್ನಿ ನಾಗಮ್ಮ, ಇಬ್ಬರು ಗಂಡು ಮಕ್ಕಳು ಹಾಗೂ ಅಪಾರಬಂಧುಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಸ್ವಗ್ರಾಮವಾದ ಗೋಪನಹಳ್ಳಿಯ ಅವರ ಜಮೀನಿನಲ್ಲಿ ಭಾನುವಾರ ನಡೆಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಸಂತಾಪ :- ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ತಾಲ್ಲೂಕು ಯಾದವ ಸಂಘದ ಅಧ್ಯಕ್ಷ ಟಿ.ರವಿಕುಮಾರ್, ಕಾಡುಗೊಲ್ಲನೌಕರರ ಸಂಘದ ಅಧ್ಯಕ್ಷ ಕೆ.ಎಸ್.ಶ್ರೀಕಾಂತ್, ತಾಲ್ಲೂಕು ಕಾಡುಗೊಲ್ಲರಸಂಘದ ಅಧ್ಯಕ್ಷ ಬೂದಿಹಳ್ಳಿರಾಜಣ್ಣ, ತಾಲ್ಲೂಕು ಗೊಲ್ಲ ಮಹಿಳಾಸಂಘದ ಅಧ್ಯಕ್ಷೆ ಚಾರುಮತಿ, ಎಚ್.ಮಹಲಿಂಗಪ್ಪ, ಹುಲಿಕುಂಟೆಕಾಂತರಾಜ್, ಜಿ.ಟಿ.ಶಶಿಧರ, ಇಂಡಸ್‌ಚಿಕ್ಕಣ್ಣ ಗೋಕುಲಪತ್ತಿನ ಸಹಕಾರಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ್ ಮುಂತಾದವರು ಸಂತಾಪ ವ್ಯಕ್ತಪಡಿಸಿದ್ಧಾರೆ.

### ಜ.20ರಂದು ಪೂರ್ವ ಸಭೆ

» ಚಿತ್ರದುರ್ಗ

ಜಿಲ್ಲಾ ಕೇಂದ್ರದಲ್ಲಿ ಮಹನೀಯರ ಜಯಂತಿ ಆಚರಣೆ ಸಂಬಂಧ ಇದೇ ಜ.20ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ.

# ಜಿಲ್ಲಾ ಆಸ್ಪತ್ರೆಯಲ್ಲೇ ಕೃತಕ ಕೀಲು ಬದಲಾವಣೆ ಶಸ್ತ್ರಚಿಕಿತ್ಸೆ; ಸಂಧ್ಯಾ ಕಾಲದ ಬಡ ರೋಗಿಗಳಿಗೆ ವರದಾನ

» ಚಿತ್ರದುರ್ಗ





ಸಂಪೂರ್ಣ ಸೊಂಟ ಹಾಗೂ ಮೊಣಕಾಲು ಕೀಲು ಬದಲಾವಣೆ ಶಸ್ತ್ರಚಿಕಿತ್ಸೆಯನ್ನು ಜಿಲ್ಲಾ ಆಸ್ಪತ್ರೆಯಲ್ಲಿ ಆರಂಭಿಸಲಾಗಿದೆ. ಸಂಧ್ಯಾ ಕಾಲದ ಬಡ ರೋಗಿಗಳಿಗೆ ಇದು ವರದಾನವಾಗಲಿದ್ದು, ಅರ್ಹ ಬಿ.ಪಿ.ಎಲ್ ಕಾರ್ಡುದಾರಿಗೆ ಎ.ಬಿ.ಆರ್.ಕೆ ಅಡಿ ಉಚಿತವಾಗಿ ಶಸ್ತ್ರ ಚಿಕಿತ್ಸೆ ನಡೆಸಲಾಗುವುದು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಹೇಳಿದರು.

ಈ ಕುರಿತು ಶನಿವಾರ ಜಿಲ್ಲಾ ಆಸ್ಪತ್ರೆ ಬಿ.ಸಿ.ರಾಯ್ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ವಯಸ್ಸಾದಂತೆ ಹಲವು ಜನರಲ್ಲಿ ಸೊಂಟ ಹಾಗೂಮೊಣಕಾಲುಸವೆತಉಂಟಾಗುತ್ತದೆ. ಇದರಿಂದ ಬಹಳಷ್ಟು ತೊಂದರೆ ಅನುಭವಿಸಬೇಕಾಗುತ್ತದೆ. ನಡೆಯಲು ಸಹ ಕಷ್ಟ ಪಡುವವರು, ಶಸ್ತ್ರಚಿಕಿತ್ಸೆಯ ನಂತರ ಸಹಜವಾಗಿ ಓಡಾಟ ನಡೆಸಬಹುದು. ಸೊಂಟ,ಮೊಣಕಾಲು ಜೊತೆ ಬೆನ್ನುಹುರಿ ಶಸ್ತ್ರಚಿಕಿತ್ಸೆಯನ್ನು ಸಹ ಜಿಲ್ಲಾ ಆಸ್ಪತ್ರೆಯಲ್ಲಿ ಕೈಗೊಳ್ಳಲಾಗುವುದು. ಪ್ರತಿ ಶನಿವಾರ ಅಥವಾ ಸೋಮವಾರದಂದು ನುರಿತ ತಜ್ಞರು ಶಸ್ತ್ರಚಿಕಿತ್ಸಕೆ ನಡೆಸಲಿದ್ದಾರೆ. ಸೊಂಟ ಹಾಗೂ ಮೊಣಕಾಲು ಕೀಲು ಬದಲಾವಣೆ ಶಸ್ತ್ರಚಿಕಿತೆಗೆ ಖಾಸಗಿ ಆಸ್ಪತ್ರೆಗಳಲ್ಲಿ ರೂ.5 ರಿಂದ 6 ಲಕ್ಷದವರೆಗೂ ವೆಚ್ಚವಾಗುತ್ತದೆ. ಅದರೆ ಜಿಲ್ಲಾ ಆಸ್ಪತ್ರೆಯಲ್ಲಿ ಇನ್‌ಪ್ಲಾಂಟ್ಸ್ ಸಹಿತ ಬಿ.ಪಿ.ಎಲ್ ಕಾರ್ಡುದಾರಿಗೆ ಎ.ಬಿ.ಆರ್.ಕೆ ಅಡಿ ಉಚಿತವಾಗಿ ಶಸ್ತ್ರ ಚಿಕಿತ್ಸೆ ನಡೆಸಲಾಗುವುದು ಎಂದು ಡಾ.ಎಸ್.ಪಿ.ರವೀಂದ್ರ ತಿಳಿಸಿದರು.

ಬೆಂಗಳೂರಿನ ಪ್ರಖ್ಯಾತ ಕೀಳುಮೂಳೆ ತಜ್ಞ ಡಾ.ವಿಜಯಕುಮಾರ್ ಅವರ ಮಾರ್ಗದರ್ಶನದಲ್ಲಿ ಸದ್ಯ ಇಬ್ಬರು ರೋಗಿಗಳಿಗೆ ಟೋಟಲ್ ಹಿಪ್ ರೀಪ್ಲೇಸಮೆಂಟ್(ಟಿ.ಹೆಚ್.ಆರ್) ಶಸ್ತ್ರಚಿಕಿತ್ಸೆ ಕೈಗೊಳ್ಳಲು ತಯಾರಿ ನಡೆಸಲಾಗಿದೆ. ಈಗಾಗಲೇ ಜಿಲ್ಲಾಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆಗೆ ಅಗತ್ಯವಾದ ಆಪರೇಷನ್ ಥೆಯಟರ್ ಕಾರ್ಯನಿರ್ವಹಿಸುತ್ತಿದೆ. ಜಿಲ್ಲಾಸ್ಪತ್ರೆಯ ಟ್ರಾಮಾ ಸೆಂಟರ್‌ನಲ್ಲಿ ಪ್ರತಿ ತಿಂಗಳು 100 ರಿಂದ 150 ಮೂಳೆ ಸಂಬಂಧಿಸಿದ ಶಸ್ತ್ರಚಿಕಿತ್ಸೆಯನ್ನು ನಡೆಸಲಾಗುತ್ತಿದೆ ಎಂದು ಕೀಳುಮೂಳೆ ವಿಭಾಗದ ತಜ್ಞವೈದ್ಯ ಡಾ.ಎಸ್.ಪಿ.ದಿನೇಶ್ ಮಾಹಿತಿ ನೀಡಿದರು. ಇವರೊಂದಿಗೆ ಜಿಲ್ಲಾಸ್ಪತ್ರೆಯ ಕೀಳುಮೂಳೆ ವಿಭಾಗದ ವೈದ್ಯರುಗಳಾದ ಡಾ.ಶ್ರೀಧರ್ ಹಾಗೂ ಡಾ.ಬಸವರಾಜ್ ಶಸ್ತ್ರಚಿಕಿತ್ಸೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

**ರೂ.114 ಕೋಟಿ ಅನುದಾನದಲ್ಲಿ 180 ಬೆಡ್ ಆಸ್ಪತ್ರೆ ನಿರ್ಮಾಣ:** ಜಿಲ್ಲಾ ಆಸ್ಪತ್ರೆ ಅವರಣದಲ್ಲಿ ಕೆ.ಎಂ.ಇ.ಆರ್.ಸಿ(ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ) ಅಡಿ ರೂ.114 ಕೋಟಿ ಅನುದಾನದಲ್ಲಿ 180 ಹಾಸಿಗೆ ಸಾಮರ್ಥ್ಯದ ನೂತನ ಆಸ್ಪತ್ರೆ ನಿರ್ಮಾಣದ ಟೆಂಡರ್ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ರೂ.114 ಕೋಟಿ ಅನುದಾನದಲ್ಲಿ ರೂ.90 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಆಸ್ಪತ್ರೆ ಕಟ್ಟಡ ನಿರ್ಮಾಣ, ರೂ.7 ಕೋಟಿ ವೆಚ್ಚದಲ್ಲಿ ಅಗತ್ಯ ವೈದ್ಯಕೀಯ ಉಪಕರಣಗಳ ಖರೀದಿ ಮಾಡಲಾಗುವುದು. ರೂ.7 ಕೋಟಿ ಅನುದಾನವನ್ನು 2 ವರ್ಷಗಳ ಮಾನವ ಸಂಪನ್ಮೂಲದ ವೇತನಕ್ಕಾಗಿ ಮೀಸಲು ಇರಿಸಲಾಗುವುದು. ರೂ.5 ಕೋಟಿ ವೆಚ್ಚದಲ್ಲಿ ಹಳೆಯ ಆಸ್ಪತ್ರೆ ಕಟ್ಟಡ ನವೀಕರಣ ಕಾಮಗಾರಿ ಕೈಗೊಳ್ಳಾಗುವುದು ಎಂದು ಡಾ.ಎಸ್.ಪಿ.ರವೀಂದ್ರ ಮಾಹಿತಿ ನೀಡಿದರು.

**ರೂ.1.10 ಕೋಟಿ ವೆಚ್ಚದಲ್ಲಿ ಇಂಟಿಗ್ರೇಟೆಡ್ ಲ್ಯಾಬರೋಟರಿ ನಿರ್ಮಾಣ:** ಕೇಂದ್ರ ಸರ್ಕಾರ ಪಿ.ಎಂ.ಅಬೀಮ್(Pradhan Mantri Ayushman Bharat Health Infrastructure Mission) ಯೋಜನಯಡಿ ರೂ.1.10 ಕೋಟಿ ಅನುದಾನದಲ್ಲಿ ಜಿಲ್ಲಾ ಸಮಗ್ರ ಸಾರ್ವಜನಿಕ ಆರೋಗ್ಯ ಪರೀಕ್ಷಾ ಪ್ರಯೋಗಾಲಯ(District integrated public health laboratory) ಸ್ಥಾಪಿಸಲಾಗುವುದು. ಇದರಿಂದ ಎಲ್ಲಾ ರೀತಿ ವೈದ್ಯಕೀಯ ಪರೀಕ್ಷೆಗಳನ್ನು ಒಂದೇ ಸೂರಿನಡಿ ಸಾರ್ವಜನಿಕರಿಗೆ ಲಭಿಸಲಿವೆ. ಜನರು ವಿವಿಧ ಪರೀಕ್ಷೆಗಳಿಗಾಗಿ ಅಲೆದಾಡುವುದು ತಪ್ಪಲಿದೆ. ಜಿಲ್ಲಾಸ್ಪತೆಯ ಹಳೆಯ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡದ ಎರಡನೇ ಮಹಡಿಯಲ್ಲಿ ಶೀಘ್ರದಲ್ಲೇ ಇಂಟಿಗ್ರೇಟೆಡ್ ಲ್ಯಾಬರೋಟರಿ ಕಾರ್ಯನಿರ್ವಹಿಸಲಿದೆ ಎಂದು ಡಾ.ರವೀಂದ್ರ ತಿಳಿಸಿದರು.

**ಕಿಮೋಥೆರಪಿ ಘಟಕ ಆರಂಭ :** ಕ್ಯಾನ್ಸರ್‌ಗೆ ಒಳಗಾದ ರೋಗಿಗಳಿಗೆ ಕಿಮೋಥೆರಪಿ ನೀಡಲು ಅನುಕೂಲವಾಗುವಂತೆ ಜಿಲ್ಲಾ ಆಸ್ಪತ್ರೆಯಲ್ಲಿ ಶೀಘ್ರವೇ ಕಿಮೋಥೆರಪಿ ಘಟಕ ಕಾರ್ಯಾರಂಭ ಮಾಡಲಿದೆ. ನಿಮ್ಹಾನ್ಸ್ ಸಹಯೋಗದಲ್ಲಿ ಕರ್ನಾಟಕ ಬ್ರೈನ್ ಹೆಲ್ತ್ ಇನ್ಸಿಯೇಟ್ (ಕಬಿ) ಕಾರ್ಯಕ್ರಮ ಜಿಲ್ಲಾ ಆಸ್ಪತ್ರೆಯಲ್ಲಿ ಶುರು ಮಾಡಲಾಗಿದೆ. ಪ್ರತಿ ಶುಕ್ರವಾರ ನಿಮ್ಹಾನ್ಸ್ ನರರೋಗ ತಜ್ಞ ಡಾ.ಕಿರಣ್‌ಗೌಡ ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯ ವರೆಗೆ ಜಿಲ್ಲಾ ಆಸ್ಪತ್ರೆಯಲ್ಲಿ ಲಭ್ಯವಿದ್ದು ರೋಗಿಗಳಿಗೆ ಚಿಕಿತ್ಸೆ ನೀಡುವರು.

ದಾವರಣಗೆರೆ ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆಯ ಸಹಯೋಗದಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿ ಸೋಮವಾರ ಹಾಗೂ ಶುಕ್ರವಾರ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಗುತ್ತಿದೆ. ಇಂಡಿಯಾ ಹಾರ್ಟ್ ಸೆಂಟರ್ ಸಹಯೋಗದಲ್ಲಿ ಪ್ರತಿ ಗುರುವಾರ ಹೃದಯ ರೋಗಿಗಳ ತಪಾಸಣೆ ನಡೆಸಲಾಗುತ್ತಿದೆ. ಜಿಲ್ಲಾ ಆಸ್ಪತ್ರೆಯ ಎಕ್ಸ್ ರೇ ಹಾಗೂ ಎಂಆರ್‌ಐ ಸ್ಕ್ಯಾನಿಂಗ್ ವಿಭಾಗದ ಕಾರ್ಯಕ್ಷಮತೆ ಹೆಚ್ಚಾಗಿದ್ದು, ದಾವಣಗೆರೆ, ವಿಜಯನಗರ, ಹಾವೇರಿ ಜಿಲ್ಲೆಗಳಿಂದಲೂ ರೋಗಿಗಳು ತಪಾಸಣೆ ಆಗಮಿಸುತ್ತಿದ್ದಾರೆ. ಜಿಲ್ಲಾ ಆಸ್ಪತ್ರೆಯಲ್ಲಿ ಹಲವಾರು ಸುಧಾರಣೆ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಸಂಪೂರ್ಣ ಉಚಿತವಾಗಿ ಉತ್ತಮ ಸೇವೆ ನೀಡಲಾಗುತ್ತಿದೆ. ರೋಗಿಗಳು ಆಸ್ಪತ್ರೆಗೆ ಆಗಮಿಸುವಾಗ ತಪ್ಪದೇ ಆಧಾರ್ ಹಾಗೂ ಪಡಿತರ ಚೀಟಿಯನ್ನು ತರಬೇಕು. ಆಸ್ಪತ್ರೆ ಸಿಬ್ಬಂದಿಗೆ ಯಾವುದೇ ಕಾರಣಕ್ಕೂ ಹಣವನ್ನು ನೀಡಬಾರದು. ಸಂದರ್ಶನದ ಅವಧಿಯಲ್ಲಿಯೇ ಒಳರೋಗಿಗಳನ್ನು ಭೇಟಿ ಮಾಡಬೇಕು. ವಾಹನಗಳನ್ನು ನಿಗಧಿತ ಪಾರ್ಕಿಂಗ್‌ಗಳಲ್ಲಿ ನಿಲುಗಡೆ ಮಾಡಬೇಕು. ಆಸ್ಪತ್ರೆಯಲ್ಲಿ ಸ್ವಚ್ಛತೆಯನ್ನು ಕಾಪಾಡುವಂತೆ ಡಾ.ಎಸ್.ಪಿ.ರವೀಂದ್ರ ಸಾರ್ವಜನಿಕರಿಗೆ ಮನವಿ ಮಾಡಿದರು.

# ವಿಜಯೇಂದ್ರ ಸಿದ್ದರಾಮಯ್ಯ ಬಗ್ಗೆ ವಿಚಾರ ಮಾಡುವುದು ಬಿಡಲಿ: ಸಚಿವ ಎಂ.ಬಿ.ಪಾಟೀಲ್

» ಚಿತ್ರದುರ್ಗ



ಬಿಜೆಪಿ ರಾಜ್ಯಾಧ್ಯಕ್ಷರಾಗಿರುವ ವಿಜಯೇಂದ್ರರವರು ಸಿದ್ದರಾಮಯ್ಯರವರ ಬಗ್ಗೆ ವಿಚಾರ ಮಾಡುವುದು ಬಿಡಲಿ.ಅವರು ಮೊದಲು ಪೂರ್ಣಾವಧಿ ಅಧ್ಯಕ್ಷರಾಗಿ ಇರ್ತಾರ ಎಂದು ಹೇಳಲಿ.ಅವರ ಕುರ್ಚಿಯ ನಾಲ್ಕು ಕಾಲಲ್ಲಿ ಮೂರು ಹೋಗಿವೆ. ಒಂದೇ ಕಾಲಲ್ಲಿ ವಿಜಯೇಂದ್ರ ಅವರ ಕುರ್ಚಿ ನಿಂತಿದೆ.ಅವರಿಗೆ ನಾನೇ ಕೇಳುತ್ತೇನೆ. ನೀವು ಎಷ್ಟು ದಿನ ರಾಜ್ಯಾಧ್ಯಕ್ಷರಾಗಿ ಇರುತ್ತೀರಿ.ಅದನ್ನು ಮೊದಲು ಹೇಳಿ.ಆಮೇಲೆ ನಾನು ಸಿಎಂ ಬಗ್ಗೆ ಮಾತನಾಡೋಣ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ಸಚಿವರಾದ ಎಂ.ಬಿ ಪಾಟೀಲ್ ಬಿಜೆಪಿ ರಾಜ್ಯಾಧ್ಯಕ್ಷರಿಗೆ ಟಾಂಗ್ ನೀಡಿದ್ದಾರೆ.

ನಗರದ ಶ್ರೀ ಮುರುಘಮಠದಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಾ ಮುಖ್ಯಮಂತ್ರಿ ಯಾವಾಗ ಬೇಕಾದರೂ ರಾಜೀನಾಮೆ ಕೊಡಬಹುದು ಎಂಬ ವಿಜಯೇಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿ ಉತ್ತರಿಸಿದರು. ಮುಡಾ ಪ್ರಕರಣದಲ್ಲಿ ಇ.ಡಿ ವರದಿ ಸಲ್ಲಿಕೆಯಾಗಿದೆ ಸಿಎಂ ರಾಜೀನಾಮೆಗೆ ಬಿಜೆಪಿ ಒತ್ತಾಯ ವಿಚಾರಕ್ಕೆ ಪ್ರತಿಕ್ರಿಯಿಸಿ ಇ.ಡಿ, ಸಿಬಿಐ, ಐಟಿ ಮೋದಿ, ಅಮಿತ್ ಶಾ ನಿರ್ದೇಶನಕ್ಕೆ ಒಳಪಡುವ ಸಂಸ್ಥೆಗಳು.ಕಾನೂನಾತ್ಮಕ ಹೋರಾಟ ನಡೆದಿದೆ.. ಅದರ ಬಗ್ಗೆ ಜಾಸ್ತಿ ಮಾತನಾಡಲ್ಲ.ಸಿಎಂ ಅವರು ಯಾವುದೇ ರೀತಿಯ ತಪ್ಪನ್ನು ಮಾಡಿಲ್ಲ.ನಮ್ಮ ಸಿಎಂ ಎಲ್ಲಾವನ್ನು ಹೆದುರಿಸಲು ಗಟ್ಟಿಯಾಗಿ ಇದ್ದಾರೆ.

ಎಂದ ಅವರು, ಕಾಂಗ್ರೆಸ್ ಶಾಸಕರಿಂದ ಸರ್ಕಾರ ಬೀಳಿಸುವ ಕೆಲಸ ಎಂಬ ಯತ್ನಾಳ್ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ ಯತ್ನಾಳ್ ಬೆಳಗ್ಗೆ, ಮಧ್ಯಾಹ್ನ, ಸಂಜೆ ಒಂದೊಂದು ಹೇಳುತ್ತಾರೆ.ಪ್ರತೀ ದಿನ ನಾಲ್ಕು ಸಲ ಹೇಳುತ್ತಾರೆ ಅದಕ್ಕೆಲ್ಲಾ ಉತ್ತರ ಕೊಡಲು ಆಗಲ್ಲ.. ಅವರು ನಮ್ಮ ಜಿಲ್ಲೆಯವರಲ್ಲ,.. ಅವರನ್ನು ನಾವು ನೋಡಿದ್ದೀವಿ... ಅದಕ್ಕೆ ನಾವು ಅವರಿಗೆ ಯಾವುದಕ್ಕೂ ಉತ್ತರವನ್ನು ಕೊಡಲ್ಲ.. ಯತ್ನಾಳ್ ರವರಿಗೆ ಹೇಳುತ್ತೇನೆ ನಮ್ಮ ಸರ್ಕಾರ ಬೀಳೋದಿಲ್ಲ...ನಿಮ್ಮ ಪಕ್ಷದಲ್ಲಿ ಇರುವ ಹೊಲಸನ್ನು ಮೊದಲು ಶುದ್ಧ ಮಾಡಿಕೊಳ್ಳಿ. ನೀವೇ ಕೊರೊನಾದಲ್ಲಿ 2000 ಕೋಟಿ ಹಗರಣ ಆಗಿದೆ ಅಂತ ವಿಜಯೇಂದ್ರ, ಯಡಿಯೂರಪ್ಪ ರವರ ಬಗ್ಗೆ ಹೇಳಿದ್ದು ನೆನಪು ಮಾಡಿಕೊಳ್ಳಿ ಎಂದು ಟೀಕಿಸಿದರು.

ನಮ್ಮ ಪಕ್ಷದ ಯಾವ ಒಬ್ಬ ಶಾಸಕನೂ ಬೇರೆ ಪಕ್ಷಕ್ಕೆ ಹೋಗೋದಿಲ್ಲ... ಬಿಜೆಪಿ ಕೆಲ ಶಾಸಕರು ನಮ್ಮಜೊತೆ ಗುರುತಿಸಿಕೊಂಡಿರೋದನ್ನು ನೀವೇ ನೋಡಿದ್ದೀರಿ...ಜೆಡಿಎಸ್ ನಿಂದ ಒಂದು ದೊಡ್ಡ ಟೀಮ್ ಹೊರಗೆ ಬರಲಿಕ್ಕೆ ರೆಡಿ ಆಗಿದೆ.ಜೆಡಿಎಸ್, ಬಿಜೆಪಿಯಿಂದ ಕನಿಷ್ಠ 25 ಜನ ಶಾಸಕರು ಸೂಕ್ತ ಸಂದರ್ಭದಲ್ಲಿ ನಮ್ಮ ಕಡೆ ಬರುತ್ತಾರೆ..ಯತ್ನಾಳ್ ರವರೇ ನಮ್ಮ ಸರ್ಕಾರ ಹೇಗೆ ಬೀಳುತ್ತದೆ.60 ಕಾಂಗ್ರೆಸ್ ಶಾಸಕರನ್ನು ರಮೇಶ್ ಜಾರಕಿಹೊಳಿ ಕರೆ ತರುತ್ತಾರೆ ಎಂಬ ಯತ್ನಾಳ್ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ ಓ.., ಓ..., ಅದೇನು ಹುಣಸೇ ಕೊಪ್ಪಾ ಅಥವಾ ಕವಡಿನಾ ಎಂದು ವ್ಯಂಗವಾಡಿದರು.

ಬಿಜೆಪಿ ಶಾಸಕರ ಸಂಪರ್ಕ ಯಾಕೆ ಅವರೇ ನಮ್ಮ ಬಳಿ ಗುರುತಿಸಿಕೊಂಡಿದ್ದಾರೆ... ಅವರ ಹೆಸರು ಹೇಳಲ್ಲ.. ಅದು ನಿಮಗೂ ಗೊತ್ತಿದೆ.. ಸೂಕ್ತ ಸಂದರ್ಭದಲ್ಲಿ ಅವರನ್ನು ಪಕ್ಷಕ್ಕೆ ಕರೆತರಲು ಮಹೂರ್ತ ಫಿಕ್ಸ್ ಮಾಡುತ್ತೇವೆ. ಅದಕ್ಕೂ ಒಂದು ಸಮಯ, ಸಂದರ್ಭ ಇರುತ್ತದೆ ಹೇಳುತ್ತೇವೆ.. ನಾವು ಆಪರೇಷನ್ ಹಸ್ತ ಮಾಡಲ್ಲ ಇವರು ಮುಳುಗ್ತಿರೋ ಹಡಗು.ಅವರೇ ಬೇಸತ್ತು ಬಿಜೆಪಿಯಲ್ಲಿ ಆರು ಬಾಗಿಲು ಆಗಿವೆ... ಯತ್ನಾಳ್, ವಿಜಯೇಂದ್ರ, ಬಿಎಸ್ ವೈ, ಅಶೋಕ್ ಹೀಗೆ ಆರು ಬಾಗಿಲುಗಳಿವೆ. ಇವರ ದೋಸೆ ತುಂಬಾ ತೂತುಗಳೇ ಇವೆ.. ಬೇರೆಯವರ ದೋಸೆಯಲ್ಲಿ ತೂತು ಹುಡುಕುತ್ತಿದ್ದಾರೆ... ಮೊದಲು ನಿಮ್ಮದು ಶುದ್ಧ ಮಾಡಿಕೊಳ್ಳಿ... ನಮ್ಮ ಬಗ್ಗೆ ಯಾಕೆ ಚಿಂತನೆ ಮಾಡುತ್ತೀರಿ..

## ಲಕ್ಕಿಹಳ್ಳಿ ಐತಿಹಾಸಿಕ ಕೋಟೆ ಸ್ವಚ್ಛಗೊಳಿಸಿದ ಯುವಕರು



» ಹೊಸದುರ್ಗ

ತಾಲೂಕಿನ ಮಾಡದಕೆರೆ ಹೋಬಳಿಯ ಐತಿಹಾಸಿಕ ಲಕ್ಕಿಹಳ್ಳಿ ಗ್ರಾಮದಲ್ಲಿರುವ ಪಾಳೇಗಾರರ ಕಾಲದ ಕೋಟೆಗಳು ಆವಸನದ ಅಂಚಿಗೆ ತಲುಪಿದ್ದು, ಕೋಟೆಗಳನ್ನು ಸ್ವಚ್ಛಗೊಳಿಸುವ ಮೂಲಕ ಕೋಟೆಗಳ ಉಳಿವಿಗಾಗಿ ಗ್ರಾಮದ ಕೆಲ ಯುವಕರು ಪಣತೊಟ್ಟಿದ್ದಾರೆ. ಭಾನುವಾರ ಸ್ವಯಂ ಪ್ರೇರಿತರಾಗಿ ಕೋಟೆಗಳನ್ನು ಸ್ವಚ್ಛಗೊಳಿಸಿ, ಅಭಿವೃದ್ಧಿಪಡಿಸುವ ಕಾರ್ಯಕ್ಕೆ ಮುಂದಡಿ ಇಟ್ಟಿದ್ದಾರೆ.ತಾಲೂಕಿನ ಈಶಾನ್ಯ ದಿಕ್ಕಿಗಿರುವ ಲಕ್ಕಿಹಳ್ಳಿ ಗ್ರಾಮಕ್ಕೆ ಸುಮಾರು 2.400 ವರ್ಷಗಳ ಇತಿಹಾಸವಿದೆ ಎಂದು ಮೈಸೂರಿನಲ್ಲಿರುವ ಶಾಸನಗಳು ಹೇಳುತ್ತಿವೆ. ಕ್ರಿ.ಶ.8 ನೇ ಶತಮಾನದಲ್ಲಿ ಲಕ್ಕಿಹಳ್ಳಿ ಗ್ರಾಮವನ್ನು 'ರತ್ನಪುರಿ' ಎಂಬ ಹೆಸರಿನಿಂದ ಕರೆಯಲಾಗುತ್ತಿತ್ತು. ಇದನ್ನು ಮೊದಲಿಗೆ 'ಸೋಮಶೇಖರ' ಮತ್ತು 'ಚಿತ್ರಶೇಖರ' ಎಂಬ ರಾಜಕುಮಾರರು ಆಳುತ್ತಿದ್ದರು. ಚಿತ್ರಶೇಖರನು ನೀರಗುಂದ ( ನೀಲಾವತಿ ಪಟ್ಟಣ) ನಾಡಿನ ರಾಜಕುಮಾರಿಯನ್ನು, ಶೌರ್ಯ ಪಂದ್ಯದಲ್ಲಿ ಕೊಂದು ಜಯಶಾಲಿಯಾಗಿ ವಿವಾಹವಾದನೆಂಬ ದಾಖಲೆಗಳಿವೆ. ನಂತರದ ದಿನಗಳಲ್ಲಿ ಈ ಪ್ರದೇಶ ಮುಂದೆ ಬಂದ ರಾಜ ಮನೆತನಗಳ ಆಳ್ವಿಕೆಗೆ ಒಳಪಟ್ಟಿತ್ತು ಎಂದು ಹೇಳಲಾಗಿದೆ. ಸುಮಾರು ಕ್ರಿ.ಶ.1604ರಲ್ಲಿ ಈ ಪ್ರದೇಶದಲ್ಲಿ ಮತ್ತೋಡಿನ ಪಾಳೆಗಾರ ಹಾಲಪ್ಪ ನಾಯಕನ ಪುತ್ರಿ ಲಕ್ಕಮ್ಮ ಎಂಬ ಮಹಿಳೆ ಗ್ರಾಮದಲ್ಲಿ ಕೋಟೆಗಳು, ಬುರುಜುಗಳು, ಮಹದ್ವಾರವನ್ನು ಕಟ್ಟಿಸಿದಳು ಎಂಬುದಕ್ಕೆ ಐತಿಹಾಸಿಕ ಪುರಾವೆಗಳು ಇಂದಿಗೂ ಸಾಕ್ಷಿಯಾಗಿವೆ. ಕ್ರಿ.ಶ.1604 ರಲ್ಲಿ ಈ ಸ್ಥಳವು 'ಲಕ್ಕವ್ವನಹಳ್ಳಿ ಕೋಟೆ' ಎಂದು ಪ್ರಸಿದ್ಧಿಯಾಗಿತ್ತು. ನಂತರದ ದಿನಗಳಲ್ಲಿ ಗಿರಿಯಪ್ಪ ನಾಯಕನು ರಾಜಧಾನಿಯನ್ನು (ರಾಣ್ಯ) ಮತ್ತೋಡಿಗೆ ಸ್ಥಳಾಂತರ ಮಾಡಿದನೆಂದು ಆಧಾರಗಳು ಹೇಳುತ್ತವೆ. 'ಲಕ್ಕವ್ವ' ಆಳ್ವಿಕೆ ನಡೆಸಿದ್ದರಿಂದ ಲಕ್ಕವ್ವನಹಳ್ಳಿ ಎಂಬ ಹೆಸರು ಮುಂದೆ ಲಕ್ಕಿಹಳ್ಳಿ ಎಂದು ಚಾಲ್ತಿಗೆ ಬಂದಿದೆ ಎಂದು ಇತಿಹಾಸಕಾರರು ಹೇಳುತ್ತಾರೆ.

## ಪ್ರಮುಖ ಸುದ್ದಿ

# ಕೇತೆ ದೇವರ ಜಾತ್ರೆ ರದ್ದು; 27ರಂದು ಸಾಂಕೇತಿಕ ಆಚರಣೆ

» ಚಳ್ಳಕೆರೆ





ಜಿಲ್ಲೆಯ ಕಾಡುಗೊಲ್ಲ ಆರಾಧ್ಯ ದೈವ ಕೇತೆದೇವರ ಜಾತ್ರೆ ಈ ಬಾರಿ ರದ್ದಾಗಿದೆ. ತಾಲ್ಲೂಕಿನ ಪುರ್ಲೆಹಳ್ಳಿ ಗ್ರಾಮದ ವಸಲುದಿನ್ನೆಯಲ್ಲಿ ಜ.27ಕ್ಕೆ ಕಳ್ಳೆಮುಳ್ಳಿನ ಜಾತ್ರೆ ನಡೆಸುತ್ತಿದ್ದರು. ಆದರೆ, ತಾಲ್ಲೂಕಿನಾದ್ಯಂತ ಶೂನ್ಯದ ಮಾರಮ್ಮ ನಡೆಯುತ್ತಿರುವ ಹಿನ್ನೆಲೆಯಲ್ಲಿ ಈ ಭಾರಿಯ ಜಾತ್ರೆ ನಿಲ್ಲಿಸಲಾಗಿದೆ.

ತಾಲ್ಲೂಕಿನ ಹಲವಾರು ಗ್ರಾಮಗಳಲ್ಲಿ ಮಾರಮ್ಮನ ಜಾತ್ರೆ ಇರುವ ಕಾರಣ, ಭಕ್ತಧಿಗಳು, ದೇವರ ಪೂಜಾರರು, ಸೋಮಮುತ್ತಿ ವಂಶದ 13 ಗುಡಿಕಟ್ಟಿನ ಗೌಡರು, ಅಣ್ಣ ತಮ್ಮಂದಿರ ಸಭೆಯ ನಿರ್ಣಯದಂತೆ ಜಾತ್ರೆ ನಡೆಸುವುದನ್ನು ನಿಲ್ಲಿಸಿ ಜ.27 ಸೋಮವಾರ ಜಾತ್ರಾ ಸ್ಥಳದಲ್ಲಿ ಪೂಜಾ ಕಾರ್ಯಗಳನ್ನು ನಡೆಸಲು ನಿರ್ಣಯಿಸಲಾಯಿತು. ಅನಾದಿಕಾಲದಿಂದಲ್ಲೂ ವಸಲು ದಿನ್ನೆಯಲ್ಲಿ ಮುಳ್ಳಿನ ಗುಡಿ ನಿರ್ಮಿಸಿ ಸುಮಾರು ಒಂದು ತಿಂಗಳಕಾಲ ವ್ರತದೊಂದಿಗೆ ಕಳಸ ಕೀಳುವ ಅದ್ಭುತ ಜಾತ್ರೆ ನಡೆಯುತ್ತಿತ್ತು. ಈ ಜಾತ್ರೆಗೆ ಕರ್ನಾಟಕ, ಆಂದ್ರಪ್ರದೇಶ, ದಾವಣಗೆರೆ, ಚಿತ್ರದುರ್ಗ, ತುಮಕೂರು, ಕೂಡ್ಲಿಗಿ, ಬಳ್ಳಾರಿಯೂ ಸೇರಿದಂತೆ ನಾನಾಭಾಗದಿಂದ ಲಕ್ಷಾಂತರ ಭಕ್ತರು ಬಂದುಪಾಲ್ಗೊಳ್ಳುತ್ತಿದ್ದರು.

ಈ ಬಾರಿ ಜಾತ್ರೆಯ ಬದಲಿ ಜ.27ರಂದು ಚನ್ನಮ್ಮನಾಗತಿಹಳ್ಳಿ ಗ್ರಾಮದ ದೇವಸ್ಥಾನದಿಂದ 13 ಗುಡಿಕಟ್ಟಿನ ವಂಶಸ್ಥರಾದ ಬೊಮ್ಮನಗೌಡ್ರು, ಕೋಣನಗೌಡ್ರು, ಪೂಜಾರಿಗಳು, ಯಜಮಾನರು, ಮರವಾಯಿ ವಂಶಸ್ಥರು, ಗುಡಿಹಳ್ಳಿ ವಂಶಸ್ಥರು, ಬಾಗಲಾರ ವಂಶಸ್ಥರು, ಹಾಗೂ ಅಣ್ಣತಮ್ಮಂದಿರು, ನೆಂಟರು ಸೇರಿ ಚನ್ನಮ್ಮನಾಗತಿಹಳ್ಳಿ ಗ್ರಾಮದಿಂದ ಸುಮಾರು ನಾಲ್ಕೈದು ಕಿ.ಮೀ ದೂರದ ಪುರ್ಲೆಹಳ್ಳಿ ಗ್ರಾಮದ ವಸಲುದಿನ್ನೆಗೆ ದೇವರನ್ನು ಮೆರವಣಿಗೆ ಮೂಲಕ ಕರೆತಂದು ಮಜ್ಜನಬಾವಿಯಲ್ಲಿ ಗಂಗಾ ಪೂಜೆ, ಹಾವಿನಗೂಡು, ಕರುವಿನಗೂಡು ಅಕ್ಕಮ್ಮಗಳ ಪೂಜೆ ನೆರವೇರಿಸಿ, ನಂತರ ಜಾತ್ರಾ ನಡೆಯುವ ಸ್ಥಳದಲ್ಲಿ ಪ್ರತಿಷ್ಠಾಪಿಸಿ, ಅನ್ನದಾಸೋಹ ನಡೆಸಿ ಸಂಪ್ರದಾಯದಂತೆ ಪೂಜಾ ಕೈಂಕರ್ಯಗಳನ್ನು ನಡೆಸಲಾಗುವುದು ನಂತರ ಚನ್ನಮ್ಮನಾಗತಿಹಳ್ಳಿ ಗ್ರಾಮಕ್ಕೆ ದೇವರನ್ನುಮೆರವಣಿಗೆಮೂಲಕದೇವರನ್ನು ಕರೆಯ್ದು ಗುಡಿದುಂಬಿಸಲಾಗುವುದು, 28ರ ಮಂಗಳವಾರ ವಿಶೇಷ ಪೂಜೆ, ಪ್ರಸಾದ, ದಾಸೋಹ ಕಾರ್ಯಕ್ರಮಗಳು ನಡೆಯಲಿವೆ ಎಂದು ಕ್ಯಾತಗೊಂಡನಹಳ್ಳಿ ಪೂಜಾರಿ ತಿಪ್ಪೇಸ್ವಾಮಿ, ಗುಡಿಹಳ್ಳಿ ವಂಶದ ಎಚ್.ಮಹಲಿಂಗಪ್ಪ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಜಯಂತಿ ಆಚರಣೆ ನಾಳೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಇದೇ ಜ.21ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ನಿಜಶರಣ ಶ್ರೀ ಅಂಬಿಗರ ಚೌಡಯ್ಯ" ಆಚರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತಅತಿಥಿಗಳಾಗಿಸಂಸದಗೋವಿಂದಎಂ ಕಾರಜೋಳ, ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್.ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಜಿಲ್ಲಾ ಗಂಗಾಂಭಿಕಾ ಬೆಸ್ತರ ಸಂಘದ ಅಧ್ಯಕ್ಷ ಹೆಚ್.ಡಿ.ರಂಗಯ್ಯ, ಕಾರ್ಯದರ್ಶಿ ಪಿ.ಶ್ರೀನಿವಾಸ್ ಭಾಗವಹಿಸುವರು. ಹಿರಿಯೂರು ಸರ್ಕಾರಿ ಪದವಿಪೂರ್ವ ಕಾಲೇಜು ಉಪನ್ಯಾಸಕ ಡಾ.ಎಸ್.ಮಾರುತಿ ಉಪನ್ಯಾಸ ನೀಡುವರು. ಚಳ್ಳಕೆರೆ ತಾಲ್ಲೂಕು ಮಲ್ಲೂರಹಳ್ಳಿಯ ರಾಜಣ್ಣ ಮತ್ತು ತಂಡದವರಿಂದ ಗೀತಗಾಯನ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ ತಿಳಿಸಿದ್ದಾರೆ.

### ಕ್ರೀಡಾ ಶಾಲೆಗೆ ಕ್ರೀಡಾಪಟಗಳ ಆಯ್ಕೆ

» ಚಿತ್ರದುರ್ಗ

ರಾಜ್ಯ ಮಟ್ಟದ ಕ್ರೀಡಾಶಾಲೆ ಹಾಗೂ ನಿಲಯಗಳಿಗೆ ಕ್ರೀಡಾಪಟುಗಳ ಆಯ್ಕೆಯನ್ನು ನಡೆಸಲು ಪ್ರತಿಭಾವಂತ ಬಾಲಕ-ಬಾಲಕಿಯರಿಗಾಗಿ ದೈಹಿಕ ಪರೀಕ್ಷೆಯನ್ನು ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಜ.24ರಂದು ಮೊಳಕಾಲ್ಮುರು ಸರ್ಕಾರಿ ಪದವಿ ಪೂರ್ವ ಕಾಲೇಜು, ಜ.27 ರಂದು ಚಳ್ಳಕೆರೆ ತಾಲ್ಲೂಕ ಕ್ರೀಡಾಂಗಣ, ಜ.28ರಂದು ಹೊಳಲ್ಕರೆ ತಾಲ್ಲೂಕ ಕ್ರೀಡಾಂಗಣ, ಜ.29 ರಂದು ಹೊಸದುರ್ಗ ತಾಲ್ಲೂಕ ಕ್ರೀಡಾಂಗಣ, ಜ.30 ರಂದು ಹಿರಿಯೂರು ತಾಲ್ಲೂಕು ಕ್ರೀಡಾಂಗಣ ಹಾಗೂ ಜ.31 ರಂದು ಚಿತ್ರದುರ್ಗ ವೀರ ವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಬೆಳಿಗ್ಗೆ 11 ಗಂಟೆಯಿಂದ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಜಿಲ್ಲಾಮಟ್ಟದ ಆಯ್ಕೆಯನ್ನು ಇದೇ ಜ.31 ಮತ್ತು ಫೆ.01ರಂದು ಚಿತ್ರದುರ್ಗದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ನಡೆಸಲಾಗುವುದು. ಕಿರಿಯರ ವಿಭಾಗದ ಕ್ರೀಡಾ ಆಯ್ಕೆ ಬಯಸುವ ಬಾಲಕ ಬಾಲಕಿಯರಿಗೆ ದಿನಾಂಕ 01-06-2025ಕ್ಕೆ 14 ವರ್ಷ ಮೀರಬಾರದು. 8ನೇ ತರಗತಿಗೆ ಸೇರಲು ಅರ್ಹತೆ ಪಡೆದಿರಬೇಕು. ಹಿರಿಯರ ವಿಭಾಗದಲ್ಲಿ ಆಯ್ಕೆ ಬಯಸಲುವ ಯುವಕ-ಯುವತಿಯರು 01-06-2025ಕ್ಕೆ 18 ವರ್ಷ ಮೀರಿಬಾರದು. ಪ್ರಥಮ ಪಿ.ಯು.ಸಿ ಸೇರಲು ಅರ್ಹತೆ ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ ವಾಲಿಬಾಲ್ ತರಬೇತುದಾರ ಮಹಮ್ಮದ್ ಮುಹೀಬುಲ್ಲಾ, ಮೊಬೈಲ್ ಸಂಖ್ಯೆ 9611673475 ಹಾಗೂ ಅಥ್ಲೆಟಿಕ್ಸ್ ತರಬೇತುದಾರ ತಿಪ್ಪಣ್ಣನ.ಎಸ್ ಮಾಳಿ ಅವರ ಮೊಬೈಲ್ ಸಂಖ್ಯೆ 9380889647ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ.ಬಿ.ಆರ್. ಅಂಬೇಡ್ಕರ್, ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ 2025-26ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಜನವರಿ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಫೆಬ್ರವರಿ 15ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. ಜಿಲ್ಲೆಯ ಯಾವುದೇ ಶಾಲೆಯಲ್ಲಿ 5ನೇ ತರಗತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೋಷಕರು ತಮಗೆ ಸಮೀಪವಿರುವ ಜಿಲ್ಲೆಯ ಯಾವುದೇ ವಸತಿ ಶಾಲೆಗಳಿಗೆ ಭೇಟಿ ನೀಡಿ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿಯೇ ತಾವು ದಾಖಲಾಗಲು ಬಯಸುವ ವಸತಿ ಶಾಲೆಗಳನ್ನು ಆದ್ಯತಾ ಕ್ರಮದಲ್ಲಿ ಆಯ್ಕೆ ಮಾಡಬೇಕು. ಅಭ್ಯರ್ಥಿಯ ಮೆರಿಟ್, ಮೀಸಲಾತಿ ಹಾಗೂ ಪ್ರವೇಶ ಬಯಸುವ ಶಾಲೆಗಳ ಆದ್ಯತಾ ಕ್ರಮದ ಮೇಲೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ Computerised Auto Selection ಮೂಲಕ ಸೀಟು ಹಂಚಿಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು 2025ರ ಜನವರಿ 25 ಕೊನೆಯ ದಿನವಾಗಿದೆ.

# ಆಧುನಿಕತೆಯ ಭರಾಟೆಯಲ್ಲಿ ಸುಗ್ಗಿ ಸಂಭ್ರಮ ಮರೆ ಆಗುತ್ತಿದೆ: ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ವಿಷಾಧ

» ಚಿತ್ರದುರ್ಗ

ಆಧುನಿಕತೆಯಭರಾಟೆಯಲ್ಲಿಸಂಕ್ರಾಂತಿಯ ಸುಗ್ಗಿ ಸಂಭ್ರಮಮರೆಯಾಗುತ್ತಿದೆ ಎಂದು ಚಿತ್ರದುರ್ಗದ ಅಪರ ಜಿಲ್ಲಾಧಿಕಾರಿ ಬಿಟಿ ಕುಮಾರಸ್ವಾಮಿ ಹೇಳಿದರು.



ನಗರದ ಐಯುಡಿಪಿ ಬಡಾವಣೆಯಲ್ಲಿ ಇತ್ತೀಚೆಗೆ ನಡೆದ ಸಂಕ್ರಾಂತಿ ಸಂಭ್ರಮ2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು,ಎಲ್ಲೆಡೆ ಸುಗ್ಗಿಯ ಸಂಭ್ರಮ ಮರೆಯಾಗುತ್ತಿದೆ. ಯುವಜನತೆ ಮೊಬೈಲ್ ನಲ್ಲಿ ಮುಳುಗಿದೆ.ಮಹಿಳೆಯರು,ಮಕ್ಕಳು ಟಿವಿಯ ಧಾರಾವಾಹಿ,ರಿಯಾಲಿಟಿ ಶೋನಂತಹ ಕಾರ್ಯಕ್ರಮಗಳಿಗೆ ಸೀಮಿತವಾಗಿದ್ದಾರೆಂದು ಅಸಮಧಾನ ವ್ಯಕ್ತಪಡಿಸಿದರು.

ಈ ಹಿಂದೆ ಹಳ್ಳಿಗಳಲ್ಲಿ ಸುಗ್ಗಿ ಸಂಭ್ರಮ ನೋಡೋದೇ ನಮ್ಮ ಪುಣ್ಯ ಎನಿಸುತ್ತಿತ್ತು. ಆದರೆ ಈಗ ಹಳ್ಳಿಗಳು ನಗರಪ್ರದೇಶಗಳಾಗಿ ಮಾರ್ಪಾಡುತ್ತಿವೆ.ಹೀಗಾಗಿ ಸಂಕ್ರಮಣದ ಸಂಸ್ಕೃತಿ,ಸಂಪ್ರದಾಯ ತೆರೆಮರೆಗೆ ಸರಿಯುತ್ತಿವೆ.ಭಾರತೀಯರ ಮೊದಲ ಹಬ್ಬ ಎನಿಸಿರುವ ಸಂಕ್ರಾಂತಿ ಹಬ್ಬ ಕೇವಲ ಎಳ್ಳು ಬೆಲ್ಲ ಹಂಚುವ ಫ್ಯಾಷನ್ ಎನಿಸಿದೆ.ಈ ಸಂಭ್ರಮದ ಹಿಂದೆ ರೈತರ ಶ್ರಮ ಇರುತ್ತಿತ್ತು.ವರ್ಷವಿಡಿ ಬೆಳೆದ ರಾಗಿ,ಭತ್ತ ಹಾಗು ವಿವಿಧ ಬೆಳೆಗಳ ರಾಶಿಹಾಕಿ ಪೂಜಿಸುವ ವಾಡಿಕೆ ಇತ್ತು.ಆ ಆಚರಣೆ ನಮ್ಮ ಸಂಸ್ಕೃತಿ,ಸಂಪ್ರದಾಯ ಮರೆಯಾಗುತ್ತಿವೆ.ಎಲ್ಲೆಡೆ ಅವಿಭಕ್ತ ಕುಟುಂಬಗಳು ಇಬ್ಭಾಗವಾಗಿ ಸ್ವಾರ್ಥದ ಬದುಕು ಸಾಗಿಸುತ್ತಿದ್ದು,ನಗರದಲ್ಲಿ ವಾಸಿಸುವ ಕುಟುಂಬ ಅಕ್ಕಪಕ್ಕದಲ್ಲಿರುವವರ ಬಾಂದವ್ಯತೆಯನ್ನು ದೂರವಿಡ್ಡಿದ್ದಾರೆ. ಯಾವುದೇ ಕುಟುಂಬಕ್ಕೆ ಏನಾದ್ರು ಸಮಸ್ಯೆ ಎದುರಾದರೆ ಅದು ಅವರಿಗೆ ಮಾತ್ರ ಸೀಮಿತವಾಗಿದೆ. ಅದನ್ನು ಬಗೆಹರಿಸಲು ಸಹ ಯಾರು ಮುಂದಾಗುವ ಮನಸು ಮಾಡುವುದಿರಲಿ,ಒಮ್ಮೆ ತಿರುಗಿ ನೋಡಲು ಸಹ ಯೋಚಿಸುವುದಿಲ್ಲ .ತಂದೆತಾಯಂದಿರು ವೃದ್ಧಾಶ್ರಮದ ಪಾಲಾಗುತಿದ್ದಾರೆ. ಹೀಗಾಗಿ ಪ್ರೀತಿ ವಾತ್ಸಲ್ಯ,ಕರುಣೆ,ಅನುಕಂಪ ಹಾಗು ಪರಸ್ಪರ ಹೊಂದಾಣಿಕೆಯ ಸ್ವಭಾವ ಕಣ್ಮರೆಯಾಗುತ್ತಿವೆ. ಇಂತಹ ವೇಳೆ ಅನ್ಯೋನ್ಯತೆ, ಒಡನಾಟವಿಲ್ಲದೇ,ದ್ವೇಷ,ಅಸೂಯೆ ಮನೆ ಮಾಡಿದ್ದು, ಸುಗ್ಗಿ ಸಂಭ್ರಮದಂತಹ ಆಚರಣೆಗಳು ತರೆಮರೆಗೆ ಸರಿಯುತ್ತಿರುವ ಸಂದರ್ಭದಲ್ಲಿ ಐಯುಡಿಪಿ ಬಡಾವಣೆಯ ಸಿದ್ದರಾಜು, ಕಲ್ಲೇಶ್,ಪುಷ್ಪ,ಜಯ್ಯಣ್ಣ,ವಿಕ್ರಂ,ನವೀನ್,ಐಯ್ಯಣ್ಣ,ಬಸಣ್ಣ,ಶಶಿಕಲಾ,ಪ್ರಕಾಶ್ ನೇತೃತ್ವದ ಸಂಕ್ರಾಂತಿ ಸಂಭ್ರಮ ಸಮಿತಿಯು ಈ ಕಾರ್ಯಕ್ರಮ ಆಯೋಜಿಸಿರೋದು ಶ್ಲಾಘನೀಯ.

ಈ ಕಾರ್ಯಕ್ರಮದಲ್ಲಿಕುಂಬಳಕಾಯಿ ,ಗೆಣಸು, ಧಾನ್ಯಗಳು,ಹಣ್ಣುಗಳು ಮತ್ತು ಬೇಳೆಕಾಳುಗಳಿಂದ ಮಾಡಿರೊ ಸಿಂಗಾರ ಹಾಗು ಕಬ್ಬಿನ ಅಲಂಕಾರವು ಕಣ್ಮನ ಸೆಲಕೆಯುತ್ತಿದೆ.ಇದು ನಮ್ಮ ಹಿರಿಯರು ಹಿಂದೆ ನಮ್ಮ ಹಳ್ಳಿಯಲ್ಲಿ ಆಚರಿಸುತ್ತಿದ್ದ ಕಣಸುಗ್ಗಿ ನೆನಪಿಸಿತು. ಇಂತಹ ಕಾರ್ಯಕ್ರಮಗಳು ಎಲ್ಲೆಡೆ ನಿರಂತರವಾಗಿ ನಡೆಯಲಿ.ವರ್ಷಕ್ಕೊಮ್ಮೆಯಾದರು ನಗರದಲ್ಲಿಸಂಭ್ರಮಮನೆಮಾಡಲಿ.ಮಕ್ಕಳು, ಮಹಿಳೆಯರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಲಿ.ಪೂರ್ವಜರ ಸಂಪ್ರದಾಯ ಉಳಿಯಲಿ ಎಂದು ಶುಭ ಹಾರೈಸಿದರು.

ದೇವರಾಜು ಅರಸ್ ಸಂಸ್ಥೆ ಸಿಇಒ ರಘುಚಂದನ್ ಮಾತನಾಡಿ ಬರದನಾಡು ಚಿತ್ರದುರ್ಗ ಅತಿ ಹಿಂದುಳಿದ ಜಿಲ್ಲೆಯಾಗಿದೆ.ಈ ಹಿಂದುಳಿದ ಪ್ರದೇಶವೆಂಬ ಹಣೆಪಟ್ಟಿತೆರವುಗೊಳಿಸಲು ಶಿಕ್ಷಣದಿಂದ ಮಾತ್ರ ಸಾದ್ಯ.ಹೀಗಾಗಿ ತಮ್ಮಮಕ್ಕಳಿಗೆ ಅಪಾರ ಆಸ್ತಿ ಗಳಿಸುವ ಬದಲಾಗಿ ಸುಶಿಕ್ಷಿತರನ್ನಾಗಿಸುವ ಮೂಲಕ ಅವರ ಜ್ಞಾನಾರ್ಜನೆಹೆಚ್ಚಿಸಬೇಕು.ಅದು ಅವರ ಬದುಕನ್ನು ರೂಪಿಸಿಕೊಳ್ಳಲು ದಾರಿದೀಪವಾಗಬೇಕು ಎಂದರು. ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ವಿ ಎಲ್‌ಪ್ರಶಾಂತ್ ಅವರು,ಸಾಹಿತ್ಯಾತ್ಮಕವಾಗಿ ಎಲ್ಲರು ತೊಡಗಿಸಿಕೊಂಡಾಗ ಸಂಕ್ರಾಂತಿ ಯಂತಹ ಸಾಂಪ್ರದಾಯಿಕ ಆಚರಣೆಗಳು ಜೀವಂತವಾಗಿ ಉಳಿಯಲು ಸಹಕಾರಿಯಾಗಿವೆ.ಇಂತಹ ಆಚರಣೆಗಳು ಬರವಣಿಗೆಯ ರೂಪದಲ್ಲಿ ಹೊರಹೊಮ್ಮಿದರೆ ಮುಂದಿನ ಪೀಳಿಗೆಗೆ ವರವಾಗಲಿದೆ.ಆಗ ಪೂರ್ವಜರು ಆರಂಭಿಸಿ ಸಂಸ್ಕೃತಿ,ಸಂಪ್ರದಾಯ ಉಳಿಸಿ ಬೆಳೆಸಲು ಮುಂದಿನ ಪೀಳಿಗೆಗೆ ಸಹಕಾರಿಯಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ,ಮಂಡ್ಯ ಜಿಲ್ಲೆಯ ಆಲೆಮನೆಗಳಲ್ಲಿ ನಡೆಯುತಿದ್ದ ಭ್ರೂಣಹತ್ಯೆ ವಿರುದ್ಧ ತಮ್ಮ ಲೇಖನಗಳಿಂದ ಸಮರವನ್ನೇ ನಡೆಸಿ, ಆ ಪಾಪಕೃತ್ಯಕ್ಕೆ ಬ್ರೇಕ್ ಹಾಕುವಲ್ಲಿ ಶ್ರಮಿಸುವ ಮೂಲಕ ರಾಜ್ಯ ಸರ್ಕಾರದಿಂದ ನೀಡುವ ಅಭಿವೃದ್ಧಪರಿಸರ ಪತ್ರಿಕೋದ್ಯಮ ಪ್ರಶಸ್ತಿಗೆ ಆಯ್ಕೆಯಾಗಿರುವ ಚಿತ್ರದುರ್ಗದ ಪತ್ರಕರ್ತರಾದ ಯೋಗೀಶ್ ಅವರನ್ನು ಅಭಿನಂದಿಸಲಾಯಿತು.ಬಳಿಕ ಮಾತನಾಡಿದ ಪತ್ರಕರ್ತ ಯೋಗೀಶ್ ಅವರು,ಪತ್ರಕರ್ತರ ದೈನಂದಿನ ಬದುಕು ಹಾಗು ಸವಾಲುಗಳ ಬಗ್ಗೆ ಪ್ರಸ್ತಾಪಿಸಿದರು. ಕಾರ್ಯಕ್ರಮದಲ್ಲಿ ಬಡಾವಣೆಯ ಮಹಿಳೆಯರು ಯುವತಿಯರು ಸಂಕ್ರಾಂತಿ ಹಾಡಿಗೆನೃತ್ಯಪ್ರದರ್ಶಿಸಿದರು.ಬಡಾವಣೆಯ ಮಕ್ಕಳು,ಯುವತಿಯರು ನೃತ್ಯ ಗಾಯನದ ಮೂಲಕ ಸಂಭ್ರಮಿಸಿದರು.ಬಳಿಕ ವೇದ ಚಿತ್ರದ ಜುಂಜಪ್ಪ ಗೀತೆಯ ಗಾಯಕ ಮೋಹನ್ ನೇತೃತ್ವದ ರಶ್ಮಿ ಶ್ರೀ ನಿವಾಸ್,ಸುಮಂತ್‌ವಶಿಷ್ಟ,ಸಾಗರ್ ತುರುವೇಕೆರೆ,ವಿನಯ್ ಭಾರ್ಗವ,ಚನ್ನಪ್ಪ ಅವರ ತಂಡ ಗಾಯನದ ಮೋಡಿ ಮಾಡಿತು.ಕಾರ್ಯಕ್ರಮವನ್ನು ಬಡಾವಣೆಯ ಶೋಭಾ ನಿರೂಪಿಸಿದರು. ಸಂಕ್ರಾಂತಿ ಸಂಭ್ರಮ ಸಮಿತಿ ಸಂಚಾಲಕ ಸಿದ್ದರಾಜು ಪ್ರಾಸ್ತಾವಿಕ ಮಾತನಾದರು.

## ವಿವೇಕಾನಂದ ಜಯಂತಿ ಪ್ರಯುಕ್ತ ಕ್ರೀಡಾಕೂಟ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಜಿ.ಆರ್.ಹಳ್ಳಿಯ ದಾವಣಗೆರೆ ವಿಶ್ವವಿದ್ಯಾನಿಲಯ ಜ್ಞಾನಗಂಗೋತ್ರಿ ಸ್ನಾತಕೋತ್ತರ ಕೇಂದ್ರದಲ್ಲಿ ಶುಕ್ರವಾರ ಸ್ವಾಮಿ ವಿವೇಕಾನಂದರ 162ನೇ ಜಯಂತಿ ಪ್ರಯುಕ್ತ ಕ್ರೀಡಾಕೂಟ ಆಯೋಜಿಸಲಾಗಿತ್ತು.



ದಾವಣಗೆರೆ ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರ ಜ್ಞಾನಗಂಗೋತ್ರಿಯಎನ್‌ಎಸ್‌ಎಸ್ ವಿಭಾಗ, ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಹಯೋಗದೊಂದಿಗೆ ವಿದ್ಯಾರ್ಥಿಗಳಿಗೆ ಕ್ರೀಡೆಗಳನ್ನು ಏರ್ಪಡಿಸಲಾಗಿತ್ತು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತ ಎಂ ನೆಲವಗಿ ಕ್ರೀಡಾಕೂಟ ಉದ್ಘಾಟಿಸಿ, ಕ್ರೀಡೆಯಿಂದ ವಿದ್ಯಾರ್ಥಿಗಳ ಜೀವನ ಯಾವ ರೀತಿಯಲ್ಲಿ ರೂಪಿಸಿಕೊಳ್ಳ ಬಹುದೆಂದು ಸ್ವಾಮಿ ವಿವೇಕಾನಂದರ ವಾಣಿಯ ಉದಾಹರಣೆಯೊಂದಿಗೆ ತಿಳಿಸಿದರು. ವೈದ್ಯಕೀಯ ಮಹಾ ವಿದ್ಯಾನಿಲಯದ ಡಾ.ಸಚ್ಚಿದಾನಂದ ಮಾತನಾಡಿ, ಕ್ರೀಡೆಯನ್ನು ಕ್ರೀಡಾ ಮನೋಭಾವದಲ್ಲಿ ನೋಡಬೇಕು. ಸೋಲು-ಗೆಲವು ಮುಖ್ಯವಲ್ಲ ಎಂದು ತಿಳಿಸಿದರು.

ಸ್ನಾತಕೋತ್ತರ ಅಧ್ಯಯನ ಕೇಂದ್ರದ ನಿರ್ದೇಶಕ ಡಾ.ಸತ್ಯನಾರಾಯಣ ಮಾತನಾಡಿ, ನಮ್ಮಎಲ್ಲಾಒತ್ತಡಗಳುಕ್ರೀಡೆಯಿಂದ ನಿವಾರಣೆಯಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಚೇತ ಎಂ ನೆಲವಿಗೆ ಅವರು ನಮ್ಮ ವಿದ್ಯಾರ್ಥಿಗಳಿಗೆ ಅನುಕೂಲವಾಗಲೆಂದು ಸುಮಾರು ರೂ. 50,000/- ಗಳಷ್ಟು ಮೌಲ್ಯದಕ್ರೀಡಾ ಸಾಮಗ್ರಿಗಳನ್ನು ನೀಡಿರುವುದನ್ನ ಸ್ಮರಿಸಿ ಧನ್ಯವಾದ ತಿಳಿಸಿದರು. ನಮ್ಮ ಎನ್‌ಎಸ್‌ಎಸ್‌ಘಟಕ-1 ಮತ್ತು 2ರ ಕಾರ್ಯಕ್ರಮಾಧಿಕಾರಿಗಳಾದ ಡಾ.ಸುಂದರಂ.ಎಂಮತ್ತುನಿವೇದಿತ ಬಿ ಟಿ ಅವರ ಕಾರ್ಯಗಳಿಗೆ ಶ್ಲಾಘನೆ ನೀಡಿದರು. ಕಾರ್ಯಕ್ರಮದಲ್ಲಿ ಸ್ನಾತಕೋತ್ತರ ಕೇಂದ್ರದ ಪ್ರಾಧ್ಯಾಪಕರಾದ ಡಾ.ರಾಜೇಂದ್ರ ಪ್ರಸಾದ್, ಡಾ.ಕೀರ್ತಿಕುಮಾರ್, ಡಾ.ಅರುಣ್‌ಕುಮಾರ್, ಡಾ. ಕುಮಾರ್, ಡಾ.ಗಿರೀಶ್, ಡಾ.ರೂಪೇಶ್ ಕುಮಾರ್, ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಪ್ರಾಧ್ಯಾಪಕರಾದ ಡಾ.ಪ್ರಕಾಶ್, ಡಾ. ಸಂಪತ್, ಡಾ.ಶಾಯರಿ, ಡಾ ಮುಬೀನ ಇದ್ದರು.

## ತಿಪ್ಪಾರೆಡ್ಡಿರವರಿಂದ ರಾಘವೇಂದ್ರ ನರ್ಸಿಂಗ್ ಕಾಲೇಜಿನಲ್ಲಿ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ



» ಚಿತ್ರದುರ್ಗ

ಒಂದು ಕಾಲದಲ್ಲಿ ಬಡತನದಲ್ಲಿದ್ದ ಭಾರತ ದೇಶದಲ್ಲಿ ಈಗ ಅನೇಕ ಅಭಿವೃದ್ಧಿ ಕೆಲಸಗಳು ನಡೆಯುತ್ತಿವೆ. ನಮ್ಮ ದೇಶದ ವಿಜ್ಞಾನಿಗಳು, ವೈದ್ಯರು, ನರ್ಸ್‌ಗಳಿಗೆ ದೇಶ ವಿದೇಶಗಳಲ್ಲಿ ಬಹಳ ಬೇಡಿಕೆಯಿದೆ ಎಂದು ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಹೇಳಿದರು.

ಕೋಟೆ ಸಮೀಪವಿರುವ ರಾಘವೇಂದ್ರ ನರ್ಸಿಂಗ್ ಕಾಲೇಜಿನಲ್ಲಿ ಶುಕ್ರವಾರ 2025 ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದರು.ಪ್ಯಾರಾ ಮೆಡಿಕಲ್, ನರ್ಸಿಂಗ್ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವಿದೆ. ನಮ್ಮ ದೇಶದ ಮಕ್ಕಳು ಅತ್ಯಂತ ಚುರುಕಾಗಿದ್ದಾರೆ. ಅವಕಾಶ ಸಿಗಬೇಕು. ಇಸ್ರೋದಲ್ಲಿ ಭಾರತದ ವಿಜ್ಞಾನಿಗಳು ಸಾಧನೆ ಮಾಡಿರುವುದರಿಂದ ಮುಂದುವರೆದ ದೇಶಗಳು ಭಾರತದ ಕಡೆ ತಿರುಗಿ ನೋಡುವಂತಾಗಿದೆ. ಪ್ರಧಾನಿ ನರೇಂದ್ರ ಮೋದಿರವರು ಭಾರತವನ್ನು ವಿಶ್ವಗುರುವನ್ನಾಗಿ ಮಾಡಲು ಹೊರಟಿರುವುದೇ ಕಾರಣ ಎಂದರು.

ಮುಂದಿನ ಭವಿಷ್ಯದ ಪ್ರಜೆಗಳಾದ ನೀವುಗಳು ದೇಶಾಭಿಮಾನ ಮೈಗೂಡಿಸಿಕೊಂಡು ಶಿಕ್ಷಣದ ಕಡೆ ಗಮನ ಕೊಡುವಂತೆ ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ, ನರ್ಸಿಂಗ್‌ಪ್ಯಾರಾ ಮೆಡಿಕಲ್ ಹಾಗೂ ಬಿ.ಇ.ಡಿ.ವಿದ್ಯಾರ್ಥಿಗಳಿಗೆ ಕರೆ ನೀಡಿದರು.ರಾಘವೇಂದ್ರ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಶ್ರೀನಿವಾಸ್ ಮಾತನಾಡುತ್ತ ಸ್ಪರ್ಧಾತ್ಮಕ ಯುಗದಲ್ಲಿ ಒಂದೊಂದು ಅಂಕಗಳಿಗೂ ಮೌಲ್ಯವಿದೆ. ನರ್ಸಿಂಗ್, ಪ್ಯಾರಾಮೆಡಿಕಲ್ ಓದಿದ ಮಕ್ಕಳಿಗೆ ಹೊರ ದೇಶಗಳಲ್ಲಿ ಹೋಗಿ ಕೆಲಸ ಮಾಡುವ ಅವಕಾಶ ಸಿಗುತ್ತದೆ. ಮೊಬೈಲನ್ನು ಒಳ್ಳೆಯದಕ್ಕಷ್ಟೆ ಬಳಸಿಕೊಳ್ಳಿ. ನಿಮ್ಮ ಮುಂದಿನ ಹಾದಿ ಸುಗಮವಾಗಿರಬೇಕಾದರೆ ಶಿಕ್ಷಣದ ಕಡೆ ಗಮನ ಕೊಡಿ ಎಂದು ತಿಳಿಸಿದರು.ನಿವೃತ್ತ ವಲಯ ಅರಣ್ಯಾಧಿಕಾರಿ ಹೆಚ್.ರಾಮಮೂರ್ತಿ ಮಾತನಾಡಿ ಪದವಿ ಮುಗಿದ ಮೇಲೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗಿ ಉತ್ತೀರ್ಣರಾದರೆ ದೊಡ್ಡ ಹುದ್ದೆಯನ್ನು ಅಲಂಕರಿಸಬಹುದು.

## ವೇಮನ ಜಯಂತಿ

ದಾವಣಗೆರೆ: ಶ್ರೀ ಮಹಾಯೋಗಿ ವೇಮನ ಹಾಗೂ ಅಂಬಿಗರ ಚೌಡಯ್ಯ ಜಯಂತಿಯನ್ನು ಜ.21 ರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ಆಚರಿಸಲಾಗುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

## ವಿವಿಧ ಸಂಘ ಸಂಸ್ಥೆಗಳಿಂದ ಅರ್ಜಿ ಆಹ್ವಾನ


ದಾವಣಗೆರೆ: ಪ್ರಸಕ್ತ ಸಾಲಿನ ದೌರ್ಜನ್ಯ ತಡೆ ಅಧಿನಿಯಮ ಮತ್ತು ಪಿಸಿಆರ್ ಕಾಯ್ದೆಯ ಬಗ್ಗೆ ಪರಿಶಿಷ್ಟ ಜಾತಿ ಮತ್ತು ವರ್ಗದ ಸಂಘ, ಸಂಸ್ಥೆಗಳು ಸೇರಿದಂತೆ ವಿವಿಧ ಸ್ವಯಂ ಸೇವಾ ಸಂಘ, ಸಂಸ್ಥೆಗಳ ಸಹಯೋಗ, ಸಮನ್ವಯದೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಲು ವಿಚಾರಗೋಷ್ಠಿ ಮತ್ತು ಕಾರ್ಯಗಾರವನ್ನು ನಡೆಸಲು ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಸ್ವಯಂ ಸಂಘ ಸಂಸ್ಥೆಯವರು ಜ.26 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಕಚೇರಿಗೆ ಸಲ್ಲಿಸಬೇಕು.

## ಪ್ರಮುಖ ಸುದ್ದಿ

# ಸಮಾಜದ ಸರ್ವರ ಹಿತಕ್ಕಾಗಿ ಶ್ರಮಿಸಿದ ಮಹಾನ್ ಋಷಿ ಶ್ರೀವೇಮನರವರು: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಕಳೆದಹಲವಾರುದಶಕಗಳಿಂದಧಾರ್ಮಿಕಕ್ಷೇತ್ರದಲ್ಲಿ ತಮ್ಮದೇಯಾದ ವಿಶೇಷ ಛಾಪು ಮೂಡಿಸಿದ ವೇಮನರವರ ಆದರ್ಶಗಳ ಪರಿಪಾಲನೆಗೆ ನಾವೆಲ್ಲರೂ ಮುಂದಾಗೋಣವೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.



ಅವರು, ಭಾನುವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಸಮಿತಿ ಆಯೋಜಿಸಿದ್ದ ವೇಮನ ಜಯಂತಿ ಕಾರ್ಯಕ್ರಮವನ್ನು ವೇಮನ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ವೇಮನ ಮಹರ್ಷಿಗಳು ಒಂದೇ ಜಾತಿಗೆ ಸೀಮತವಾಗದೆ ಸಮಸ್ತ ಮಾನವ ಕುಲದ ಸರ್ವತೋಮುಖ ಅಭಿವೃದ್ದಿಗೆ ಪ್ರಾಮಾಣಿಕ ಪ್ರಯತ್ನ ನಡೆಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ಪಾಷ, ವೇಮನವರು ಧಾರ್ಮಿಕ ಕ್ಷೇತ್ರಗಳೂ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲೂ ತಮ್ಮ ಛಾಪುಮೂಡಿಸುವಲ್ಲಿ ಯಶಸ್ವಿಯಾಗಿದ್ದರು. ಸರ್ಕಾರ ಇವರ ಕೊಡುಗೆಯನ್ನು ಪ್ರತಿವರ್ಷವೂ ಎಲ್ಲರೂ ನೆನಪಿಸಿಕೊಳ್ಳುವಂತೆ ಮಾಡಲು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿವತಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸುತ್ತಾ ಬಂದಿದೆ. ಕಾರ್ಯಕ್ರಮಕ್ಕೆ ತಾಲ್ಲೂಕು ರೆಡ್ಡಿ ಸಮುದಾಯವೂ ಸಹ ಉತ್ತಮ ಸಹಕಾರ ನೀಡುತ್ತಾ ಬಂದಿದೆ ಎಂದರು.

ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮಭರಮಣ್ಣ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದ ರಮೇಶ್ಗೌಡ, ಕೆ.ವೀರಭದ್ರಪ್ಪ, ನಾಮನಿರ್ದೇಶನ ಸದಸ್ಯ ಬಡಗಿಪಾಪಣ್ಣ, ಜಾಜೂರು ಗ್ರಾಮ ಪಂಚಾಯಿತಿ ಅಧ್ಯಕ್ಷರಂಜನ್, ಸಮುದಾಯದಮುಖಂಡರಾದ ದಿನೇಶ್ರೆಡ್ಡಿ, ವೆಂಕಟೇಶ್ರೆಡ್ಡಿ, ಶಶಿಧರ, ನರಸಿಂಹಪ್ಪ, ಚಲುಮೇಶ್, ರಂಗಪ್ಪ, ಸುರೇಶ್, ವೀರಣ್ಣ ಮುಂತಾದವರು ಉಪಸ್ಥಿತರಿದ್ದರು.

## ಸುಸೂತ್ರವಾಗಿ ನಡೆದ ನವೋದಯ ಪರೀಕ್ಷೆಗಳು : ನವೋದಯ ಶಾಲೆ ದಾಖಲಾತಿಗೆ ಹೆಚ್ಚಿನ ಬೇಡಿಕೆ.



» ಚಳ್ಳಕೆರೆ

ನವೋದಯ ಶಾಲೆಯ ಆರನೇ ತರಗತಿಗೆ ಪ್ರವೇಶ ಪರೀಕ್ಷೆಗಳು ನಗರದ ನಾಲ್ಕು ಕೇಂದ್ರಗಳಲ್ಲಿ ಶನಿವಾರ ಸುಸೂತ್ರವಾಗಿ ನಡೆದವು ಎಂದು ಪರೀಕ್ಷಾ ನೋಡಲ್ ಅಧಿಕಾರಿ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಬಿಸಿನೀರುಮುದ್ದಪ್ಪ ಸರ್ಕಾರಿ ಪ್ರೌಢಶಾಲೆ, ಹೆಗ್ಗೆರೆ ತಾಯಮ್ಮ ಪ್ರೌಢಶಾಲೆ, ಸ್ವಾಮಿವಿವೇಕಾನಂದ ಆಂಗ್ಲಮಾಧ್ಯಮ ಶಾಲೆ, ಆದರ್ಶ ವಿದ್ಯಾಲಯದ ಪರೀಕ್ಷ ಕೇಂದ್ರಗಳ ಮುಂಭಾಗ ಪರೀಕ್ಷೆ ಬರೆಯಲು ತಾಲ್ಲೂಕಿನ ವಿವಿಧ ಭಾಗಗಳಿಂದ ವಿದ್ಯಾರ್ಥಿಗಳು ಬೆಳಗ್ಗೆ 9 ಗಂಟೆಗೆ ಪರೀಕ್ಷಾರ್ಥಿಗಳೊಂದಿಗೆ ಪೋಷಕರು ಸಹ ಜಮಾಯಿಸಿದ್ದರು. 11.30ರಿಂದ1 ಗಂಟೆಯವರೆಗೂ ಪರೀಕ್ಷೆ ಯಾವುದೇ ಅಡೆತಡೆ ಇಲ್ಲದೆ ಸುಲಲಿತವಾಗಿ ನಡೆದಿದ್ದು, 987 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಅರ್ಜಿಸಲ್ಲಿಸಿದ್ದರು. ಅದರಲ್ಲಿ 914 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ, 73 ವಿದ್ಯಾರ್ಥಿಗಳು ಗೈರಾಗಿದ್ದರು ಎಂದು ತಿಳಿಸಿದ್ಧಾರೆ.

## ಫಾಸ್ಟ್ ನ್ಯೂಸ್

### ವಿವಿಧ ಇಲಾಖೆಗಳ ಗ್ರೂಪ್ ಬಿ ಸ್ಪರ್ಧಾತ್ಮಕ ಪರೀಕ್ಷೆ: 4623 ಅಭ್ಯರ್ಥಿಗಳು ಗೈರು

» ಚಿತ್ರದುರ್ಗ

ಕರ್ನಾಟಕ ಲೋಕಸೇವಾ ಅಯೋಗದ ವತಿಯಿಂದ ವಿವಿಧ ಇಲಾಖೆಗಳ ಗ್ರೂಪ್-ಬಿ ಉಳಿಕೆ ಮೂಲ ವೃಂದದಲ್ಲಿನ ಹುದ್ದೆಗಳಿಗೆ ಭಾನುವಾರ ನಡೆದ ಸ್ಪರ್ಧಾತ್ಮಕ ಪರೀಕ್ಷೆಯು ಜಿಲ್ಲೆಯಲ್ಲಿ ಶಾಂತಿಯುತವಾಗಿ ಯಾವುದೇ ಗೊಂದಲವಿಲ್ಲದೆ ಜರುಗಿತು. ಚಿತ್ರದುರ್ಗ ನಗರದ 21 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಿತು. ಪತ್ರಿಕೆ-1 ಸಾಮಾನ್ಯ ಪತ್ರಿಕೆಗೆ ಜಿಲ್ಲೆಯಲ್ಲಿ ಒಟ್ಟು 7783 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದರು. ಈ ಪೈಕಿ 3160 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 4623 ಅಭ್ಯರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಬಿ.ಬಸಾಪುರ ದಾವಣಗೆರೆ ಉತ್ತರ ವಲಯ ಇವರ ಸಹಯೋಗದಲ್ಲಿ ಜನವರಿ 22 ರಂದು ಬೆಳಿಗ್ಗೆ 10.30ಕ್ಕೆ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಬಿ.ಬಸಾಪುರ ದಾವಣಗೆರೆ ಉತ್ತರ ವಲಯದಲ್ಲಿ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಉದ್ಘಾಟನಾ ಸಮಾರಂಭ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಗಣಿ, ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಉದ್ಘಾಟಿಸುವರು. ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್, ಪಾಲಿಕೆ ಸದಸ್ಯರಾದ ಶಿವಲೀಲಾ ಕೊಟ್ರಯ್ಯ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಸುರೇಶ್ ಬಿ. ಇಟ್ನಾಳ್, ಪಾಲಿಕೆ ಆಯುಕ್ತರಾದ ರೇಣುಕಾ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ವೀರೇಶ್ ಒಡೇನಪುರ, ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಬಿ.ಬಸಾಪುರ ದಾವಣಗೆರೆ ಉತ್ತರ ವಲಯದ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ರಮೇಶ್, ಮತ್ತು ಕೆ.ಹೆಚ್ ಗುರುಸಿದ್ದಯ್ಯ, ಉಪಸ್ಥಿತರಿರುವರು.

### ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಪ್ರವಾಸ

» ದಾವಣಗೆರೆ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಅಪರ್ಣಾ ಎಂ ಕೊಳ್ಳಾ ಅವರು ಜನವರಿ 23 ಮತ್ತು 24 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಜನವರಿ 23 ರಂದು ಬೆಳಿಗ್ಗೆ 10.30ಕ್ಕೆ ದಾವಣಗೆರೆ ಆಗಮಿಸಿ ಆರ್.ಟಿ.ಇ ಅನುಷ್ಠಾನ ಮತ್ತು ಮಕ್ಕಳ ಶಿಕ್ಷಣದ ಜೊತೆಗೆ, ರಕ್ಷಣೆ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 2 ಗಂಟೆಗೆ ಆರ್.ಟಿ.ಇ ಕಾಯ್ದೆ-2009ರ ಕುರಿತು ಮಕ್ಕಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು. ಜನವರಿ 24 ರಂದು ಬೆಳಿಗ್ಗೆ 10.30ಕ್ಕೆ ಹರಿಹರದಲ್ಲಿ ಆಯೋಜಿಸಿರುವ ಬಾಲ್ಯವಿವಾಹ ಮತ್ತು ಪೋಕ್ಸೋ ಕಾಯ್ದೆ ತರಬೇತಿ ಹಾಗೂ ಮಕ್ಕಳ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12.30ಕ್ಕೆ ಆರ್.ಟಿ.ಇ ಕಾಯ್ದೆ-2009ರ ಕುರಿತು ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಆಯೋಜಿಸಿರುವ ಸಭೆಯಲ್ಲಿ ಭಾಗವಹಿಸುವರು.

### ಅರ್ಜಿ ಅವಧಿ ವಿಸ್ತರಣೆ

» ಚಿತ್ರದುರ್ಗ

ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ನಡೆಸುತ್ತಿರುವ ಗ್ರಂಥಾಲಯ ವಿಜ್ಞಾನ ತರಬೇತಿ ಶಾಲಾ ಪ್ರವೇಶಾತಿಗೆ ಅರ್ಜಿ ಸಲ್ಲಿಕೆ ಅವಧಿಯನ್ನು ಜ.31 ರವರೆಗೆ ವಿಸ್ತರಿಸಲಾಗಿದೆ. ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಡಿಯಲ್ಲಿ ರಾಜ್ಯದ 4 ಕಂದಾಯ ವಿಭಾಗಗಳಾದ ಬೆಂಗಳೂರು, ಮಂಗಳೂರು, ಧಾರವಾಡ ಮತ್ತು ಕಲಬುರಗಿ ಕೇಂದ್ರಗಳಲ್ಲಿ 6 ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿ ಶಾಲಾ ಪ್ರವೇಶಾತಿ ಹಮ್ಮಿಕೊಂಡಿದ್ದು, ಈ ತರಬೇತಿಗೆ ಅರ್ಜಿ ಸಲ್ಲಿಕೆ ಅವಧಿಯನ್ನು ಜ. 31 ರವರೆಗೆ ವಿಸ್ತರಿಸಲಾಗಿದೆ.

### ಮಹಾಯೋಗಿ ವೇಮನ ಜಯಂತಿಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ವೇಮನರ ವಚನಗಳು ಸಮಾಜಕ್ಕೆ ದಾರಿದೀಪ



» ಚಿತ್ರದುರ್ಗ

ಮಹಾಯೋಗಿ ವೇಮನರು ವಚನಗಳ ಮೂಲಕ ಸಮಾಜದ ಅಂಕು-ಡೊಂಕು ತಿದ್ದಿ ಸರಿ ದಾರಿಗೆ ಯತ್ನಿಸಿದವರು. ವೇಮನರ ವಚನಗಳು ಸಮಾಜಕ್ಕೆ ದಾರಿದೀಪವಾಗಿವೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ "ಮಹಾಯೋಗಿ ವೇಮನ ಜಯಂತಿ ಆಚರಣೆ ಸಮಾರಂಭದಲ್ಲಿ ವೇಮನರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಜಯಂತಿ ಆಚರಣೆಗಳು ಜಾತಿಯ ಒಗ್ಗಟ್ಟು, ಜಾತಿಯ ಬಲ ಪ್ರದರ್ಶನವಲ್ಲ. ಮಹನೀಯರನ್ನು ಯಾವುದೇ ಜಾತಿಗೆ ಸೀಮಿತ ಮಾಡುವುದು ಸರಿಯಲ್ಲ. ಮಹನೀಯರ ಸಂದೇಶ, ಬದುಕು, ವಿಚಾರಧಾರೆಗಳು ಇಡೀ ಮಾನವ ಸಂಕುಲಕ್ಕೆ ಸಂಬಂಧಪಟ್ಟಿವೆ. ವೇಮನ ವಿಚಾರ ತಿಳಿದುಕೊಳ್ಳುವ ಮೂಲಕ ನಾವು ಮೌಲ್ಯಯುತ ಬದುಕು ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ರೆಡ್ಡಿ ಸಮುದಾಯ ಆರ್ಥಿಕವಾಗಿ, ಶೈಕ್ಷಣಿಕವಾಗಿ, ರಾಜಕೀಯವಾಗಿ, ಸಾಮಾಜಿಕವಾಗಿ ಉತ್ತಮ ಸಮಾಜವಾಗಿದೆ. ಮಹನೀಯರ ಜಯಂತಿ ಕಾರ್ಯಕ್ರಮಗಳಿಗೆ ಮಕ್ಕಳನ್ನು ಕರೆದುಕೊಂಡು ಬರುವ ಮೂಲಕ ಮಹನೀಯರ, ಮಾನವಾತಾವಾದಿಗಳ ವಿಚಾರಧಾರೆಗಳನ್ನು ತಿಳಿಸಬೇಕು ಎಂದು ತಿಳಿಸಿದ ಅವರು, ಪ್ರಸ್ತುತ ದಿನಗಳಲ್ಲಿ ಸಂಸ್ಕೃತಿ, ಸಂಸ್ಕಾರ ಅಳಿವಿನಂಚಿನಲ್ಲಿವೆ. ಹಾಗಾಗಿ ಕುಸಿಯುತ್ತಿರುವ ಮೌಲ್ಯಗಳನ್ನು ಕಟ್ಟಬೇಕು. ಆ ಮೂಲಕ ಸಮಾಜವನ್ನು ಉತ್ತಮವಾಗಿ ಮಾರ್ಗಕ್ಕೆ ಕೊಂಡ್ಯೊಯಲು ಸಾಧ್ಯವಾಗಲಿದೆ ಎಂದು ಹೇಳಿದರು.

ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ ಮಾತನಾಡಿ, ವೇಮನರು ತೆಲುಗಿನಲ್ಲಿ ಬರೆದ ಅನೇಕ ವಚನಗಳು ಬೇರೆ ಬೇರೆ ಭಾಷೆಗಳಲ್ಲದೇ ಕನ್ನಡಕ್ಕೂ ಭಾಷಾಂತರಗೊಂಡಿವೆ. ಮಹಾಯೋಗಿ ವೇಮನರ ವಚನಗಳು ಸಮಾಜಕ್ಕೆ ಮಾರ್ಗದರ್ಶನವಾಗಿದ್ದು, ಅವರ ವಚನಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಚಳ್ಳಕೆರೆ ತಾಲ್ಲೂಕು ಬೇಡರೆಡ್ಡಿಹಳ್ಳಿ ಜಿ.ವಿ.ಆಂಜನಪ್ಪ ಸ್ಮಾರಕ ಸಂಯುಕ್ತ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಎಸ್.ಬಿ.ಭೀಮರೆಡ್ಡಿ ಉಪನ್ಯಾಸ ನೀಡಿ, ವೇಮನರು ಹೇಳಿದ ವಚನಗಳಲ್ಲಿ ನಮ್ಮ ಜೀವನಕ್ಕೆ ಅನ್ವಯಿಸುವ, ಜೀವನ ಉತ್ತಮವಾಗಿ ಸಾಗುವುದಕ್ಕೆ, ಬೇಕಾಗುವ ಜ್ಞಾನ ಪಡೆಯುವುದಕ್ಕಾಗಿ ವೇಮನ ವಚನಗಳನ್ನು ಓದಿ ಅರ್ಥೈಸಿಕೊಂಡು ಬದುಕಿದರೆ ಜೀವನ ಸಾರ್ಥಕವಾಗಲಿದೆ ಎಂದು ಹೇಳಿದರು.

ವೇಮನರು ಕೇವಲ ರೆಡ್ಡಿ ಸಮುದಾಯಕ್ಕೆ ಮಾತ್ರ ಸೀಮಿತ ಎಂಬ ಸಂಕುಚಿತ ಮನೋಭಾವದಿಂದ ಹೊರಬರಬೇಕು. ವೇಮನರು ಜಗತ್ತು ಕಂಡ ದಾರ್ಶನಿಕರು. ವೇಮನರನ್ನು ವಿಶಾಲ ದೃಷ್ಠಿಕೋನದಿಂದ ಗಮನಿಸಿ, ಅರ್ಥೈಸಿಕೊಂಡರೆ ವೇಮನರು ಸಂಪೂರ್ಣವಾಗಿ ಅರ್ಥವಾಗುತ್ತಾರೆ ಎಂದು ತಿಳಿಸಿದ ಅವರು, ವೇಮನರ ವಚನಗಳನ್ನು ನಾವು ತಿಳಿದುಕೊಂಡು ನಮ್ಮ ಮುಂದಿನ ಪೀಳಿಗೆಗೆ ಈ ಎಲ್ಲ ವಿಷಯಗಳನ್ನು ವರ್ಗಾಯಿಸಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಕಾರ್ಯನಿರ್ವಹಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ರೆಡ್ಡಿ ಸಮುದಾಯದ ನಿವೃತ್ತ ಅಧಿಕಾರಿಗಳಾದ ವಿಶ್ವನಾಥ ರೆಡ್ಡಿ, ಇಂಟೂರು ಜಯರಾಮರೆಡ್ಡಿ, ರಾಮಕೃಷ್ಣರೆಡ್ಡಿ, ಹನುಮಂತರೆಡ್ಡಿ, ವೆಂಕಟೇಶ್ ರೆಡ್ಡಿ, ಮುಖಂಡರಾದ ವಿಜಯಕುಮಾರ್ ಡಿ.ಕೆ. ಹಟ್ಟಿ, ಮಂಜುನಾಥ ಬೆಳಗಟ್ಟ, ವಕೀಲ ಬಾಬುರೆಡ್ಡಿ ಸೇರಿದಂತೆ ಮತ್ತಿತರರು ಇದ್ದರು.

# ಬಾಯಿ ಆರೋಗ್ಯದ ಬಗ್ಗೆಯೂ ಇರಲಿ ಕಾಳಜಿ



» ಚಿತ್ರದುರ್ಗ

ಮನುಷ್ಯನ ಬಾಯಿಯ ಆರೋಗ್ಯಕ್ಕೂ ಹಾಗೂ ದೇಹದ ಆರೋಗ್ಯಕ್ಕೂ ಸಂಬಂಧ ಇದೆ. ಹಾಗಾಗಿ ವ್ಯಕ್ತಿಗಳು ತಮ್ಮ ಬಾಯಿ ಆರೋಗ್ಯದ ಬಗ್ಗೆ ಜವಾಬ್ದಾರಿ ಹಾಗೂ ಕಾಳಜಿ ವಹಿಸಬೇಕು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ವಿಜಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಶನಿವಾರ ಬಾಯಿ ಆರೋಗ್ಯ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವಿಶ್ವ ಬಾಯಿಯ ಆರೋಗ್ಯ ದಿನವು ಉತ್ತಮ ಸಾಮಾನ್ಯ ಆರೋಗ್ಯ ಕಾಪಾಡಿಕೊಳ್ಳಲು ಉತ್ತಮ ಮೌಖಿಕ ನೈರ್ಮಲ್ಯದ ಪ್ರಾಮುಖ್ಯತೆಯ ಅರಿವು ಮೂಡಿಸುವತ್ತ ಕಾರ್ಯನಿರ್ವಹಿಸುತ್ತದೆ. ಈ ವರ್ಷದ ಥೀಮ್, "ನಿಮ್ಮ ಬಾಯಿಯ ಬಗ್ಗೆ ಹೆಮ್ಮೆಯಿಂದಿರಿ", ವ್ಯಕ್ತಿಗಳು ತಮ್ಮ ಮೌಖಿಕ ಆರೋಗ್ಯದ ಜವಾಬ್ದಾರಿಯನ್ನು ತೆಗೆದುಕೊಳ್ಳಲು ಮತ್ತು ಉತ್ತಮ ಮೌಖಿಕ ನೈರ್ಮಲ್ಯ ಅಭ್ಯಾಸಗಳು ಅವರ ಜೀವನದ ಮೇಲೆ ಬೀರಬಹುದಾದ ಧನಾತ್ಮಕ ಪರಿಣಾಮವನ್ನು ಆಚರಿಸಲು ಪ್ರೋತ್ಸಾಹಿಸುತ್ತದೆ ಎಂದು ಹೇಳಿದರು.

ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಎಲ್ಲಾ ವ್ಯಕ್ತಿಗಳಿಗೂ ಹಲ್ಲಿನ ಆರೋಗ್ಯ ಜಾಗೃತಿಗೆ ಉತ್ತೇಜಿಸುವ ಗುರಿ ಹೊಂದಲಾಗಿದ್ದು, ನಿಮ್ಮ ಮೌಖಿಕ ನೈರ್ಮಲ್ಯದ ಬಗ್ಗೆ ಹೆಮ್ಮೆಪಡಿ ಎಂದು ಹೇಳಿದರು. 40 ವರ್ಷ ಮೇಲ್ಪಟ್ಟವರಿಗೆ ದಂತ ಭಾಗ್ಯ ಯೋಜನೆ ಅಡಿಯಲ್ಲಿ ಉಚಿತವಾಗಿ ದಂತಪಕ್ತಿ ಅಳವಡಿಸುವ ಕಾರ್ಯಕ್ರಮ ಜಾರಿಯಲ್ಲಿದೆ. ಅಲ್ಲದೆ ಎಲ್ಲಾ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ದಂತ ತಜ್ಞರ ನೇಮಕಾತಿ ಮತ್ತು ದಂತ ಚಿಕಿತ್ಸೆಗೆ ಅಗತ್ಯವಿರುವ ಪರಿಕರಗಳು ಔಷಧಗಳು ದೊರೆಯುತ್ತಿದು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ವಿಜಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಜಯಶ್ರೀ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ನರ್ಸಿಂಗ್ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

## ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದು ಹೋಗಿದೆ



ಚಿತ್ರದುರ್ಗ: ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದು ಹೋಗಿದೆ, ಮಹಿಳೆಯರ ಮೇಲೆ ಅತ್ಯಾಚಾರ ಪ್ರಕರಣಗಳು ಹೆಚ್ಚಾಗಿವೆ, ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಳ್ಳಿತ್ತಿದ್ದಾರೆ, ಅಮಾಯಕರ ಮೇಲೆ ಸುಳ್ಳು ಕೇಸ್ ದಾಖಲಿಸಿ, ಜೈಲಿಗೆ ಕಳಿಸುವ ಷಡ್ಯಂತ್ರ ನಡಿತಿದೆ ಎಂದು ಕುಡುಚಿಯ ಮಾಜಿ ಶಾಸಕ ಹಾಗೂ ಬಿಜೆಪಿಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ ಆರೋಪಿಸಿದ್ದಾರೆ. ಚಿತ್ರದುರ್ಗ ನಗರದಲ್ಲಿಂದು ಆಯೋಜನೆಗೊಂಡಿದ್ದ ಬಾಬಾ ಸಾಹೇಬರ ಸಂವಿಧಾನ ಬದಲಾಯಿಸಿದ್ದು ಯಾರೂ ? ಬಲಪಡಿಸಿದ್ದು ಯಾರು ? ಎಂಬ ಕಾರ್ಯಕ್ರಮಕ್ಕೆ ಆಗಮಿಸಿದಾಗ ಸುದ್ದಿಗಾರರೊಂದಿಗೆ ಮಾತನಾಡಿದ ಆವರು, ಕುಲ್ಲಕ ಕಾರಣಕ್ಕೆ ಇವರು ರಾಜಕೀಯ ಮಾಡ್ತಿದ್ದಾರೆ ಪೊಲೀಸರು ನಿಜವಾದ ಡ್ಯೂಟಿಯನ್ನು ಮರೆತು ಬಿಟ್ಟಿದ್ದಾರೆಜನರ ಮಾನ, ಪ್ರಾಣ ಕಾಪಾಡಬೇಕಿದ್ದ ಪೊಲೀಸರು ಕೆಲಸ ಮರೆತಿದ್ದಾರೆ ಈ ಸರ್ಕಾರದ ಕೈಗೊಂಬೆಯಾಗಿ ಪೊಲೀಸರು ಡ್ಯೂಟಿ ಮಾಡ್ತಿದ್ದಾರೆ* ಹಾಗಾಗಿಯೇ ರಾಜ್ಯದಲ್ಲಿ ಹಗಲು ದರೋಡೆಗಳು ನಡೆಯುತ್ತಿವೆ ಹಗಲಿನಲ್ಲೇ ಬ್ಯಾಂಕ್‌ಗಳಿಗೆ ನುಗ್ಗಿ ಲಾಂಗು, ಮಚ್ಚು, ಪಿಸ್ತೂಲ್ ತೋರಿಸಿ ದರೋಡೆ ಮಾಡುತ್ತಿದ್ದಾರೆ ಎಂದರು. ಸಿಎಂ ಮಂಗಳೂರಿನಲ್ಲಿ ಇದ್ದಾಗ, ಅಲ್ಲಿಯೇ ರಾಬರಿ ಆಗುತ್ತೆ ಕರ್ನಾಟಕದಲ್ಲಿ ಪೊಲೀಸ್ ಇಲಾಖೆ ಜೀವಂತವಾಗಿ ಇದ್ಯಾ? ಪೊಲೀಸರು ಪೊಲೀಸ್ ಡ್ಯೂಟಿ ಮಾಡ್ತಿದ್ದಾರ? ಕಾಂಗ್ರೆಸ್ ಏಜೆಂಟ್‌ರಾಗಿ ಕೂತಿದ್ದಾರಾ ಎನ್ನುವ ಪ್ರಶ್ನೆ ಇಡೀ ದೇಶದಲ್ಲಿ ಮೂಡಿದೆ ಮುಡಾ ಹಗರಣದಲ್ಲಿ ಏನೂ ತಪ್ಪೇ ನಡೆದಿಲ್ಲ ಎಂದು ಸಿಎಂ ಹೇಳ್ತಿದ್ರು ನಂತರ ಭೇಷರತ್ ಆಗಿ ಸೈಟ್‌ಗಳನ್ನ ವಾಪಾಸ್ ಕೊಟ್ರು 14, ಅಲ್ಲ 140 ಸೈಟ್ ಎಂದು ಇಡಿ ವರದಿಯನ್ನು ಬಿಡುಗಡೆ ಮಾಡಿದೆ ಸಿಎಂ ಹೇಳಿದಂಗೆ 14 ಸೈಟ್‌ಗೆ 60 ಕೋಟಿಯಾದ್ರೆ, 140 ಸೈಟ್‌ಗೆ ಎಷ್ಟಾಯ್ತು? ಭ್ರಷ್ಟಾಚಾರದ ಆರೋಪನ್ನು ಸಿಎಂ ಹೊತ್ತಿದ್ದಾರೆ ಈ ರಾಜ್ಯವನ್ನು ಹೇಗೆ ಮುನ್ನಡೆಸುತ್ತಾರೆ ಎಂಬುದು ನನ್ನ ಪ್ರಶ್ನೆ?

## ಪ್ರಮುಖ ಸುದ್ದಿ

# ನಿರುದ್ಯೋಗಿ ವಿದ್ಯಾರ್ಥಿಗಳಿಗೆ ಆಸರೆಯಾಗಿದೆ ಯುವನಿಧಿ: ಜಿಲ್ಲಾ ಗ್ಯಾರಂಟಿ ಅಧ್ಯಕ್ಷ ಆರ್.ಶಿವಣ್ಣ



» ಚಿತ್ರದುರ್ಗ

ಪದವಿ ಮತ್ತು ಡಿಪ್ಲೋಮ ಮುಗಿಸಿರುವ ನಿರುದ್ಯೋಗಿ ಯುವಕ-ಯುವತಿಯರಿಗೆ ರಾಜ್ಯ ಸರ್ಕಾರದ ಯುವನಿಧಿ ಯೋಜನೆಯು ಆಸರೆಯಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಆರ್.ಶಿವಣ್ಣ ಹೇಳಿದರು.

ನಗರದ ಸರ್ಕಾರಿ ಕಲಾ ಕಾಲೇಜಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾದ ಯುವನಿಧಿ ವಿಶೇಷ ನೋಂದಣಿ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

2023-24ನೇ ಸಾಲಿನಲ್ಲಿ 180 ದಿನ ಪೂರೈಸಿರುವ ಪದವಿ ಮತ್ತು ಡಿಪ್ಲೋಮ ವೃತ್ತಿಪರ ತರಬೇತಿ ಪಡೆದ ನಿರುದ್ಯೋಗಿ ವಿದ್ಯಾರ್ಥಿಗಳು ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಯುವನಿಧಿ ಯೋಜನೆಯು ಜಾರಿಗೆ ಬಂದು 1 ವರ್ಷಗಳಾಗಿದ್ದು, ರಾಜ್ಯ ಸರ್ಕಾರವು ನಿರುದ್ಯೋಗಿಗಳಿಗೆ ಅನುಕೂಲವಾಗಲಿ ಎಂದು ಈ ಯೋಜನೆಯನ್ನು ಜಾರಿಗೆ ತಂದಿದೆ ಎಂದು ಹೇಳಿದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರಿಗೆ ತುಂಬಾ ಪ್ರಯೋಜನವನ್ನು ನೀಡಿವೆ ಅದರಲ್ಲಿ ಶಕ್ತಿ ಯೋಜನೆಯು ಮಹಿಳೆಯರಿಗೆ ಬಹಳ ಅನುಕೂಲವಾಗಿದ್ದು, ಇದೇ ಜ.20 ರವರೆಗೆ ಯುವನಿಧಿ ವಿಶೇಷ ನೋಂದಣಿ ಅಭಿಯಾನ ಇದ್ದು, ನಂತರವೂ ಈ ಯೋಜನೆಗೆ ಅರ್ಜಿ ಸಲ್ಲಿಸಬಹುದು. ಯುವನಿಧಿ ಯೋಜನೆಯು ನಿರುದ್ಯೋಗಿ ಪದವೀಧರರಿಗೆ 3000/- ಮತ್ತು ಡಿಪ್ಲೋಮ ದವರಿಗೆ 1500/- ರೂ. ಗಳನ್ನು ಒದಗಿಸುವ ಅಭೂರ್ತಪೂರ್ವ ಯೋಜನೆ ಇದಾಗಿದ್ದು, ಪ್ರತಿಯೊಬ್ಬ ನಿರುದ್ಯೋಗಿಗಳಿಗೆ ಡಿಬಿಟಿ ಮೂಲಕ ಹಣ ಸಂದಾಯ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಆಯುಕ್ತಾಲಯ ಸಹಾಯಕ ನಿರ್ದೇಶಕಿ ತನುಜಾ ಎಸ್ ರಾಂಪುರೆ ಪ್ರಾಸ್ತಾವಿಕವಾಗಿ ಮಾತನಾಡಿ, ಇದೇ ಜ.20ರವರೆಗೆ ರಾಜ್ಯಾದ್ಯಾದಂತ ಯುವನಿಧಿ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಗ್ರಾಮ ಒನ್, ಕರ್ನಾಟಕ ಒನ್, ಕಾಲೇಜು, ವಿಶ್ವವಿದ್ಯಾಲಯ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ಉಚಿತವಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಹೇಳಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ನವೆಂಬರ್-2024ರ ಅಂತ್ಯಕ್ಕೆ 4717 ಮಂದಿ ಈ ಯೋಜನೆಯ ಪ್ರಯೋಜನ ಪಡೆದಿದ್ದು, 6,76,50.000 ರೂ. ಗಳನ್ನು ಪಾವತಿ ಮಾಡಲಾಗಿದೆ. ಎಂದು ತಿಳಿಸಿದರು. ಯುವನಿಧಿ ಪ್ಲಸ್ ಅಡಿಯಲ್ಲಿ ನಾಲ್ಕು ಕೌಶಲ್ಯ ತರಬೇತಿಗಳನ್ನು ಆರಂಭಿಸಲಾಗಿದ್ದು, ಕರ್ನಾಟಕ ಕೌಶಲ್ಯ ಪೋರ್ಟಲ್‌ನಲ್ಲಿ ವಿದ್ಯಾರ್ಥಿಗಳ ಡಾಟಾ ನಮೂದಿಸಲಾಗಿದೆ. 4 ವಾರದಿಂದ 4 ತಿಂಗಳವರೆಗೆ ತರಬೇತಿಯನ್ನು ಸರ್ಕಾರವು ನೀಡುತ್ತಿದೆ. ತರಬೇತಿ ಮುಗಿದ ನಂತರ ಉದ್ಯೋಗ ಅಥವಾ ಸ್ವಯಂ ಉದ್ಯೋಗ ಪಡೆದುಕೊಂಡು ಹೆಚ್ಚು ಹೆಚ್ಚು ಕೌಶಲ್ಯ ರೂಢಿಸಿಕೊಳ್ಳಿ ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷ ಡಿ.ಎನ್ ಮೈಲಾರಪ್ಪ ಮಾತನಾಡಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ತಾಲ್ಲೂಕು ಗ್ಯಾರಂಟಿ ಯೋಜನೆ ಸಮಿತಿ ಅಧ್ಯಕ್ಷಆರ್.ಪ್ರಕಾಶ್,ಸಮಿತಿಯಸದ್ಯಸರಾದ ಅಬ್ದುಲ್ಲಾ ಶಾ ವಲಿ, ಉದ್ಯೋಗಾಧಿಕಾರಿ ರವೀಂದ್ರ ಡಿ, ಉದ್ಯೋಗ ವಿನಿಮಯ ಕಚೇರಿಯ ಸಿಬ್ಬಂದಿಗಳು, ಹಾಗೂ ಸರ್ಕಾರಿ ಕಲಾ ಕಾಲೇಜಿನ ಪ್ರಾಂಶುಪಾಲ ಬಿ.ಟಿ.ತಿಪ್ಪೇರುದ್ರಸ್ವಾಮಿ, ಕಾಲೇಜಿನ ಸಹಾಯಕ ಪ್ರಾಧ್ಯಾಪಕರು, ಯುವನಿಧಿ ಯೋಜನೆ ಸಂಯೋಜಕರು, ಸೇರಿದಂತೆ ಕಾಲೇಜಿನವಿದ್ಯಾರ್ಥಿಗಳುಉಪಸ್ಥಿತರಿದ್ದರು. ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಎಸ್.ಪಾಂಡುರಂಗಪ್ಪ ಸ್ವಾಗತಿಸಿದರು, ಸರ್ಕಾರಿ ಕಲಾ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಬಿ.ಮುರುಳಿಧರ ವಂದಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T